11 ಆಗಸ್ಟ್ 2025 ಸೋಮವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 153 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆತ್ಮೀಯವಾಗಿ ಬರಮಾಡಿ ಕೊಂಡರು.



ಒಬ್ಬರ ಸ್ವಭಾವ ಮತ್ತೊಬ್ಬರ ಸ್ವಭಾವವನ್ನು ಹೋಲುವುದಿಲ್ಲ » 2



ಹಿಂದೂ ಧರ್ಮ ಅತ್ಯಂತ ಶ್ರೇಷ್ಠ ಧರ್ಮ » 3



ನೋಟೀಸ್ ನೀಡದೆ ಮತದಾರರ ಹೆಸರು ಅಳಿಸಿಲ್ಲ » 4

# ಸಿಂಧೂರ ಯಶಸ್ಸಿಗೆ ಭಾರತೀಯ ತಂತ್ರಜ್ಞಾನ ನೆರವು

## ಬೆಂಗಳೂರನ್ನು ಕೊಂಡಾಡಿದ ಪ್ರಧಾನಿ ಮೋದಿ | ಹಳದಿ ಮೆಟ್ರೊ ಮಾರ್ಗ, ವಂದೇ ಭಾರತ್ ರೈಲಿಗೆ ಚಾಲನೆ

• ಪ್ರಜೋದಯ ವರದಿ

**ಬೆಂಗಳೂರು :** ಪಾಕಿಸ್ತಾನ ವಿರುದ್ಧ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಯಶಸ್ಸಿನ ಹಿಂದೆ ಭಾರತೀಯ ತಂತ್ರಜ್ಞಾನ ಹಾಗು ಮೇಕ್ ಇನ್ ಇಂಡಿಯಾದ ಕೊಡುಗೆ ಸಾಕಷ್ಟಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದರು.

ಬೆಂಗಳೂರಿನಲ್ಲಿ ಭಾನುವಾರ ಹಳದಿ ಮೆಟ್ರೊ ಮಾರ್ಗದ ಉದ್ಘಾಟನೆ ಮತ್ತು ಬೆಂಗಳೂರು-ಬೆಳಗಾವಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಪರೇಷನ್ ಸಿಂಧೂರ ಮೂಲಕ ಕೆಲವೇ ಗಂಟೆಗಳಲ್ಲಿ ಪಾಕಿಸ್ತಾನದೊಳಗೆ ನುಗ್ಗಿ ಭಯೋತ್ಪಾದಕ ನೆಲೆಗಳನ್ನು ನಾಶ ಮಾಡಿದ ಭಾರತದ ಸಾಮರ್ಥ್ಯದ ಹೊಸ ಮುಖವನ್ನು ಇಡೀ ಜಗತ್ತೇ ಕಂಡಿತು ಎಂದರು.

ಇಂದು ಭಾರತವು ಅತ್ಯಂತ ವೇಗವಾಗಿ ಬೆಳವಣಿಗೆ ಸಾಧಿಸುತ್ತಿರುವ ಆರ್ಥಿಕತೆಯಾಗಿದೆ. ಕಳೆದ 11



ವರ್ಷಗಳಲ್ಲಿ ನಮ್ಮ ಆರ್ಥಿಕತೆಯು 10ನೇ ಸ್ಥಾನದಿಂದ 4ನೇ ಸ್ಥಾನಕ್ಕೆ ಏರಿಕೆ ಕಂಡಿದೆ. ಇದೇ ವೇಗದೊಂದಿಗೆ ನಾವು ಮೂರನೇ ಆರ್ಥಿಕತೆಯತ್ತ ಪ್ರಗತಿ ಸಾಧಿಸುತ್ತಿದ್ದೇವೆ. ವಿಶ್ವದ ಮೂರನೇ ದೊಡ್ಡ ಮೆಟ್ರೊ ಜಾಲ ಈಗ ಭಾರತದಲ್ಲಿದೆ. 2014ರಲ್ಲಿ ದೇಶದ ಐದು ನಗರಗಳಲ್ಲಿ ಮಾತ್ರ ಮೆಟ್ರೊ ಸೇವೆ ಲಭ್ಯವಿತ್ತು. ಈಗ 24 ನಗರಗಳಿಗೆ ವಿಸ್ತರಿಸಿದೆ. ಕಳೆದ 11 ವರ್ಷಗಳಲ್ಲಿ 40 ಸಾವಿರ ಕಿ.ಮೀ. ಗಿಂತಲೂ ಹೆಚ್ಚು ಉದ್ದದ ರೈಲು ಮಾರ್ಗವನ್ನು ವಿದ್ಯುದೀಕರಣ ಮಾಡಲಾಗಿದೆ ಎಂದು ಪ್ರಧಾನಿ ತಿಳಿಸಿದರು.

**ಬೆಂಗಳೂರು ಕೊಡುಗೆ ಅಪಾರ**

ದೇಶದ ಮಾಹಿತಿ ತಂತ್ರಜ್ಞಾನ, ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸುವಲ್ಲಿನ ಪ್ರಗತಿಗೆ ಬೆಂಗಳೂರು ಮತ್ತು ಬೆಂಗಳೂರು ಜನರ ಕೊಡುಗೆ ಅಪಾರ. ವಿಶ್ವದ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಬೆಂಗಳೂರು ಸ್ಥಾನ ಪಡೆದಿದೆ. ಬೆಂಗಳೂರು ಈಗ ಅತಿ ಉದ್ದದ ಮೆಟ್ರೊ ಜಾಲಹೊಂದಿರುವ ದೇಶದ ಎರಡನೇ ನಗರವಾಗಿದೆ ಎಂದರು.

**ಬಿಜೆಪಿ-ಕಾಂಗ್ರೆಸ್ ನಾಯಕರ ಸಹ ಪ್ರಯಾಣ**

ಬೆಂಗಳೂರಿನಲ್ಲಿ ಮೆಟ್ರೊ ರೈಲು ಉದ್ಘಾಟನೆಗೆ ಬಂದಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯ ಕಾಂಗ್ರೆಸ್ ನಾಯಕರೊಂದಿಗೆ ರೈಲಿನಲ್ಲಿ ಒಟ್ಟಿಗೆ ಪ್ರಯಾಣಿಸುವ ಮೂಲಕ ಹಲವು ವಿಚಾರಗಳ ಕುರಿತು ಚರ್ಚಿಸಿದರು. ನಮ್ಮ ಮೆಟ್ರೊ ಹಳದಿ ಮಾರ್ಗಕ್ಕೆ ಚಾಲನೆ ನೀಡಿದ ಪ್ರಧಾನಿ ಮೋದಿ ಎಲೆಕ್ಟ್ರಾನಿಕ್ ಸಿಟಿವರೆಗೆ ಪ್ರಯಾಣಿಸಿದರು. ಕೆಲ ನಿಮಿಷ ಶಾಲಾ ಮಕ್ಕಳೊಂದಿಗೆ ಮಾತುಕತೆ ನಡೆಸಿದರು. ಬಳಿಕ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮೆಟ್ರೊನಲ್ಲಿ ಪ್ರಯಾಣ ಮಾಡಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್, ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮತ್ತಿತರರಿದ್ದರು.

> ಬೆಂಗಳೂರಿನ ಜನರ ಆತ್ಮದಲ್ಲಿ ತತ್ವಜ್ಞಾನ, ಆ್ಯಕ್ಷನ್‌ನಲ್ಲಿ ಟೆಕ್ಜ್ಞಾನ ಇದೆ. 21ನೇ ಶತಮಾನದಲ್ಲಿ ನಗರ ಯೋಜನೆ ಹಾಗು ಮೂಲಭೂತ ಸೌಕರ್ಯ ಒದಗಿಸುವುದು ಮುಖ್ಯ. ಸಿಲಿಕಾನ್ ಸಿಟಿಯನ್ನು ಭವಿಷ್ಯಕ್ಕೆ ಅನುಕೂಲವಾಗುವಂತೆ ತಯಾರಿ ನಡೆಸುವ ಅಗತ್ಯವಿದೆ. ಕರ್ನಾಟಕಕ್ಕೆ ಕಾಲಿಡುತ್ತಿದ್ದಂತೆ ನನ್ನದು ಎನ್ನುವ ಭಾವನೆ ಮೂಡುತ್ತದೆ. ಇಲ್ಲಿನ ಸಂಸ್ಕೃತಿ, ಪ್ರೀತಿ ಮತ್ತು ಕನ್ನಡ ಭಾಷೆಯ ಸಿಹಿ ಹೃದಯ ಸ್ಪರ್ಶಿಸುತ್ತದೆ.
> -ನರೇಂದ್ರ ಮೋದಿ, ಪ್ರಧಾನಿ

### ಮೆಟ್ರೊಗೆ ರಾಜ್ಯ ಸರ್ಕಾರದ್ದೇ ಸಿಂಹಪಾಲು : ಸಿಎಂ

ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದಲ್ಲಿ ನಮ್ಮ ಮೆಟ್ರೊ ನಿರ್ಮಿಸಲಾಗುತ್ತಿದೆ. ಅದರಲ್ಲಿ ರಾಜ್ಯದ್ದೇ ಹೆಚ್ಚು ಪಾಲಿದೆಯೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಬೆಂಗಳೂರು ಮೆಟ್ರೊ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ಅದು ಕೇಂದ್ರ ಮತ್ತು ರಾಜ್ಯ ಸರ್ಕಾರದ ಜಂಟಿ ಯೋಜನೆ ಎಂದರು.

ಬೆಂಗಳೂರು ಮೆಟ್ರೊಗೆ ಈ ವರೆಗೆ ರಾಜ್ಯ ಸರ್ಕಾರವು 25,379 ಕೋಟಿ ರೂ. ವೆಚ್ಚ ಮಾಡಿದ್ದರೆ ಕೇಂದ್ರ ಸರ್ಕಾರ 7,468.86 ಕೋಟಿ ರೂ. ಖರ್ಚು ಮಾಡಿದೆ. ಕೇಂದ್ರವು ನಮಗೆ ಸಾಲವನ್ನು ನೀಡಿದೆ. ಅದನ್ನು ಬಡ್ಡಿ ಸಮೇತ ವಾಪಾಸ್ ಮಾಡಬೇಕಿದೆ. ಈಗಾಗಲೇ 3,987 ಕೋ.ರೂ. ಸಾಲವನ್ನು ಮರುಪಾವತಿಸಿದ್ದೇವೆಂದರು.

ಮೆಟ್ರೊ 3ಎ ಹಂತದ ಯೋಜನೆಗೆ ಡಿಪಿಆರ್ ಸಿದ್ಧವಾಗಿದ್ದು, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಶೀಘ್ರವೇ ಅನುಮತಿ ನೀಡಿ, ಅಗತ್ಯ ನೆರವು ಒದಗಿಸಬೇಕೆಂದು ಪ್ರಧಾನಿ ಮೋದಿ ಅವರನ್ನು ಕೋರಿದರು.

# ಇಂದಿನಿಂದ ವಿಧಾನ ಮಂಡಲ ಅಧಿವೇಶನ

• ಪ್ರಜೋದಯ ವರದಿ

**ಬೆಂಗಳೂರು:** ವಿಧಾನ ಮಂಡಲ ಅಧಿವೇಶನ ಆ.11ರ ಸೋಮವಾರದಿಂದ ಆರಂಭವಾಗಲಿದ್ದು, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಾಗು ಜೆಡಿಎಸ್ ಜಂಟಿಯಾಗಿ ಹೋರಾಟ ನಡೆಸಲು ಸಜ್ಜಾಗಿವೆ.

ಕಳೆದ ವಿಧಾನಸಭೆ ಅಧಿವೇಶನದಲ್ಲಿ ಬಿಜೆಪಿಗೆ ಆಡಳಿತ ಪಕ್ಷದ ವಿರುದ್ಧ ಧ್ವನಿ ಎತ್ತಲು ಪ್ರಮುಖ ವಿಚಾರಗಳಿದ್ದವು. ಆದರೆ, ಅದನ್ನು ಸರಿಯಾದ ರೀತಿಯಲ್ಲಿ ಕಮಲ ಪಡೆ ಬಳಕೆ ಮಾಡಿಕೊಂಡಿರಲಿಲ್ಲ. ವಿಪಕ್ಷ ನಾಯಕ ಆರ್. ಅಶೋಕ್ ಒಂದು ಕಡೆಯಾದರೆ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರದ್ದು ಮತ್ತೊಂದು ನಡೆ ಎಂಬಂತಿತ್ತು. ಬಿಜೆಪಿಯಲ್ಲಿನ ರೆಬೆಲ್ ತಂಡ ಕೂಡ ಸೂಕ್ತ ರೀತಿಯಲ್ಲಿ ಸಹಕಾರ ನೀಡುತ್ತಿರಲಿಲ್ಲ.

ಈ ಬಾರಿ ಬಿಜೆಪಿ ವಿರೋಧ ಪಕ್ಷವಾಗಿ ಧ್ವನಿ ಎತ್ತಲು ಈ ಬಾರಿಯೂ ಹಲವು ಅಸ್ತ್ರಗಳಿವೆ. ಅದರಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣ ಪ್ರಮುಖವಾಗಿದೆ. ಸರ್ಕಾರದ ವಿರುದ್ಧ ಅದನ್ನು ಪ್ರಯೋಗ ಮಾಡಲು ಬಿಜೆಪಿ ಮುಂದಾಗಿದೆ. ಅದಕ್ಕೆ ಶಾಸಕರ ಬೆಂಬಲ ಎಷ್ಟರ ಮಟ್ಟಿಗೆ ಸಿಗಲಿದೆ ಎಂಬುವುದೇ ಕುತೂಹಲ.



ಶಾಸಕ ಬಸವರಾಜ ಪಾಟೀಲ್ ಯತ್ನಾಳ್ ಅವರು ಬಿಜೆಪಿಯಿಂದ ಉಚ್ಚಾಟನೆಯಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಸದನದಲ್ಲಿ ಅವರು ಯಾವ ರೀತಿ ಬಿಜೆಪಿ ನಾಯಕತ್ವಕ್ಕೆ ತಿರುಗೇಟು ನೀಡುತ್ತಾರೆ. ಸರ್ಕಾರವನ್ನು ಹೇಗೆ ಕಟ್ಟಿ ಹಾಕುತ್ತಾರೆಂಬುದು ಕುತೂಹಲ ಕೆರಳಿಸಿದೆ.

ಅಧಿವೇಶನದ ಹಿನ್ನಲೆಯಲ್ಲಿ ಬಿಜೆಪಿ ನಾಯಕರು ಈಗಾಗಲೇ ಒಂದು ಸುತ್ತಿನ ಸಭೆ ನಡೆಸಿದ್ದಾರೆ. ಆರ್. ಅಶೋಕ್, ಬಿ.ವೈ. ವಿಜಯೇಂದ್ರ, ಅಶ್ವತ್ಥ ನಾರಾಯಣ ಹಾಗು ಜೆಡಿಎಸ್ ಶಾಸಕರು ಸೇರಿ ಪ್ರಮುಖ ನಾಯಕರು ಸಭೆಯಲ್ಲಿದ್ದರು. ಅಧಿವೇಶನದಲ್ಲಿ ಯಾವ ವಿಚಾರಗಳನ್ನು ಮುಂದಿಟ್ಟುಕೊಂಡು ಹೋರಾಟ ಮಾಡಬೇಕೆಂಬ ಬಗ್ಗೆ ಚರ್ಚೆ ಆಗಿದೆ.

# ಅಂಗನವಾಡಿ ಸಹಾಯಕರ ನೇಮಕಾತಿಯಲ್ಲಿ ಅವ್ಯವಹಾರ

## ಅಲ್ಪಸಂಖ್ಯಾತರಿಗೆ ಮೀಸಲಿದ್ದ ಕೇಂದ್ರ ಅನ್ಯರ ಪಾಲು | ಆಕ್ಷೇಪಣೆ ಸಲ್ಲಿಸಲೂ ಅವಕಾಶವಿಲ್ಲ

• ಪ್ರಜೋದಯ ವರದಿ

ಸಕಲೇಶಪುರ: ಪಟ್ಟಣದ ಅಂಗನವಾಡಿ ಕೇಂದ್ರಗಳಲ್ಲಿ ಸಹಾಯಕರ ಹುದ್ದೆಗೆ ನಡೆದಿರುವ ನೇಮಕಾತಿ ಪ್ರಕ್ರಿಯೆಯಲ್ಲಿ ಭಾರೀ ಅವ್ಯವಹಾರ ನಡೆದಿದೆ ಎಂಬ ಆರೋಪ ಕೇಳಿಬಂದಿದೆ.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿತ್ತು. ಮೊದಲ ಹಂತದಲ್ಲಿ ಅರ್ಜಿ ಸಲ್ಲಿಸಿದ ಅನೇಕ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಿ ಈಗಾಗಲೇ ಆಯ್ಕೆಯಾಗಿದ್ದವರನ್ನೇ ಪರಿಗಣಿಸುವ ರೀತಿಯಲ್ಲಿ ನೇಮಕ ಪ್ರಕ್ರಿಯೆ ನಡೆಸಲಾಗಿದೆ ಎಂಬುದು ಸಾರ್ವಜನಿಕ ಆರೋಪವಾಗಿದೆ.

ಅಂಗನವಾಡಿ ಕೇಂದ್ರಗಳಲ್ಲಿ ನಿರ್ದಿಷ್ಟ ಜಾತಿ ಅಥವಾ ಸಮುದಾಯದ ಜನಸಂಖ್ಯೆ ಹೆಚ್ಚಿರುವ ಪ್ರದೇಶದಲ್ಲಿ ಅದೇ ಸಮುದಾಯದ ಮಹಿಳೆಯನ್ನು ನೇಮಕ ಮಾಡಬೇಕೆಂಬ ನಿಯಮವಿದೆ. ಆದರೆ ಸಕಲೇಶಪುರದ ಚಂಪಕ ನಗರ ರಸ್ತೆ, ಆಚಂಗಿ ಬಲಭಾಗ, ಕುಶಾಲನಗರ ಮುಂತಾದ ಪ್ರದೇಶಗಳಲ್ಲಿ ಮುಸ್ಲಿಂ ಜನಸಂಖ್ಯೆ ಹೆಚ್ಚಿದ್ದರೂ ಸಮುದಾಯದ ಮಹಿಳೆಯರಿಗೆ ಮೀಸಲಾಗಬೇಕಾದ ಹುದ್ದೆಗಳನ್ನು ಅನ್ಯ ಸಮುದಾಯದವರಿಗೆ ನೀಡಿದ್ದಾರೆಂದು ತಿಳಿದುಬಂದಿದೆ.

**ತಡೆ ಹಿಡಿದಿದ್ದ ಸಿ. ಸತ್ಯಭಾಮ**

ನೇಮಕ ಪ್ರಕ್ರಿಯೆ ಕಡತ ಪರಿಶೀಲಿಸಿದ್ದ ಹಿಂದಿನ ಜಿಲ್ಲಾಧಿಕಾರಿ ಸಿ.ಸತ್ಯಭಾಮ ಅವರು, ಇದು ಸಮಂಜಸವಲ್ಲ, ಅರ್ಹರ ನೇಮಕಾತಿ ಆಗಿರುವ ಕುರಿತು ಸಂಶಯವಿದೆ ಎಂದು ಅನುಮೋದನೆ ನೀಡದೆ ಲೋಪ ಸರಿಪಡಿಸುವಂತೆ ಸೂಚಿಸಿದ್ದರು. ಸತ್ಯಭಾಮ ಅವರ ವರ್ಗಾವಣೆ ನಂತರ ನೂತನ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರಿಗೆ ವಿಚಾರ ತಿಳಿಸದೆ ಅನುಮೋದನೆ ಪಡೆಯಲಾಗಿದೆ ಎಂದು ತಿಳಿದುಬಂದಿದೆ.


**ಭಾಷಾ ಪರೀಕ್ಷೆಯಲ್ಲೂ ಅಕ್ರಮ**

ಅಂಗನವಾಡಿ ಕೇಂದ್ರಗಳಲ್ಲಿ ಸಹಾಯಕರ ಹುದ್ದೆಗಳಿಗೆ ಆಕ್ಷೇಪಣೆ ಸಲ್ಲಿಸಲು ಆ. 14 ಕೊನೆಯ ದಿನಾಂಕವಾಗಿದ್ದರೂ ಎರಡು ದಿನ ಮುಂಚಿತವಾಗಿ (ಆ. 12) ಭಾಷಾ ಪರೀಕ್ಷೆಗೆ ಅಭ್ಯರ್ಥಿಗಳನ್ನು ಕರೆಯಲಾಗಿದೆ. ಇದು ಆಕ್ಷೇಪಣೆ ಸಲ್ಲಿಸಲು ನೀಡಿದ್ದ ಗಡುವಿಗೆ ವಿರುದ್ಧವಾಗಿದೆ. ಭಾಷಾ ಅಲ್ಪಸಂಖ್ಯಾತರ ಭಾಷಾ ಪರೀಕ್ಷೆಯನ್ನು ಯಾರು ಮತ್ತು ಹೇಗೆ ನಡೆಸುತ್ತಾರೆಂಬುದರ ಕುರಿತು ಸ್ಪಷ್ಟ ಮಾಹಿತಿ ನೀಡಿಲ್ಲ.

ಪಟ್ಟಣದ ಆಜಾದ್ ರಸ್ತೆಯ ಅಂಗನವಾಡಿ ಕೇಂದ್ರಕ್ಕೆ ಈಗಾಗಲೇ ಆಯ್ಕೆಯಾದ ತಾತ್ಕಾಲಿಕ ಪಟ್ಟಿಯಲ್ಲಿರುವ ಇಬ್ಬರಲ್ಲಿ ಒಬ್ಬರಾದ ಶಕುಂತಲಾ ಅವರಿಗೆ ಅಲ್ಪಸಂಖ್ಯಾತರ ಭಾಷೆ ಬಾರದ ಕಾರಣ ಸಂದರ್ಶನಕ್ಕೆ ಹಾಜರಾಗಲು ಸಾಧ್ಯವಿಲ್ಲ. ಭಾಷೆಯ ಬಗ್ಗೆ ಅರಿವಿದ್ದ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಿ, ಭಾಷೆಯ ಅರಿವು ಇಲ್ಲದ ಒಬ್ಬ ಹಾಗು ಮತ್ತೊಬ್ಬರನ್ನು ಆಯ್ಕೆ ಮಾಡಿ ಪೂರ್ವನಿಗದಿಯಂತೆ ಒಬ್ಬರಿಗೆ ಹುದ್ದೆ ನೀಡಲಾಗಿದೆ.

### ಕಾನೂನು ಹೋರಾಟಕ್ಕೆ ನಿರ್ಧಾರ

ಅಂಗನವಾಡಿ ಸಹಾಯಕರ ನೇಮಕಾತಿ ಪ್ರಕ್ರಿಯೆ ಕಾನೂನು ಬಾಹಿರವಾಗಿದ್ದು, ಅದನ್ನು ಪ್ರಶ್ನಿಸಿ ಕಾನೂನು ಹೋರಾಟಕ್ಕೆ ಸ್ಥಳೀಯ ಸಂಘ-ಸಂಸ್ಥೆಗಳು ಮುಂದಾಗಿವೆ. ಈ ಪ್ರಕ್ರಿಯೆ ಮುಂದುವರಿದರೆ ಜಿಲ್ಲಾಧಿಕಾರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿಗಳು ನ್ಯಾಯಾಲಯಕ್ಕೆ ಉತ್ತರ ನೀಡಬೇಕಾಗುತ್ತದೆ.




**ಅರ್ಜಿ ತಿರಸ್ಕೃತ ಅಭ್ಯರ್ಥಿಗಳಲ್ಲಿ ಗೊಂದಲ**

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದ ಅನೇಕ ಮಹಿಳೆಯರು ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸಿದ್ದರೂ ಅರ್ಜಿ ತಿರಸ್ಕರಿಸಲಾಗಿದೆ. ಅದಕ್ಕೆ ಕಾರಣವೇನು ಎಂಬುದರ ಬಗ್ಗೆ ಯಾವ ಮಾಹಿತಿ ಅಥವಾ ಹಿಂಬರಹ ನೀಡಿಲ್ಲ. ವಿಶೇಷವಾಗಿ ಆಜಾದ್ ರಸ್ತೆ ನಿವಾಸಿ ಸ್ಥಳೀಯ ಅಂಗನವಾಡಿಗೆ ಅರ್ಜಿ ಸಲ್ಲಿಸಿದ್ದ ಅನೀಶಾ ಎಂಬ ಮಹಿಳೆಯ ಅರ್ಜಿಯನ್ನೂ ತಿರಸ್ಕರಿಸಲಾಗಿದೆ.

ನೇಮಕಾತಿ ಪ್ರಕ್ರಿಯೆಯ ಪಾರದರ್ಶಕತೆ ಕುರಿತು ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಇಲಾಖೆಯ ಸಿಬ್ಬಂದಿ ಸ್ಪಷ್ಟ ಉತ್ತರ ನೀಡಲು ವಿಫಲರಾಗಿದ್ದಾರೆ. ಜೊತೆಗೆ ಭಾಷಾ ಪರೀಕ್ಷೆಗೆ ಜಿಲ್ಲಾಧಿಕಾರಿ ಅಥವಾ ತಹಶೀಲ್ದಾರ್ ಹುದ್ದೆಯ ಉನ್ನತ ಅಧಿಕಾರಿಗಳು ಹಾಜರಾಗದೇ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ ಕೆಲವರನ್ನಷ್ಟೇ ಕರೆದಿದ್ದಾರೆ ಎನ್ನಲಾಗಿದೆ.

**ಸ್ಥಳೀಯರ ಬೇಡಿಕೆ ಏನು**

ಈ ಪ್ರಕರಣದ ಕುರಿತು ಸಂಪೂರ್ಣ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಭ್ರಷ್ಟಾಚಾರದ ಮೂಲಕ ನೇಮಕವಾದವರನ್ನು ವಜಾಗೊಳಿಸಿ ಅರ್ಹ ಅಭ್ಯರ್ಥಿಗಳಿಗೆ ನ್ಯಾಯ ನೀಡಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ. ಈ ಸಂಬಂಧ ಪ್ರತಿಕ್ರಿಯೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರು ಸಂಪರ್ಕಕ್ಕೆ ಸಿಗಲಿಲ್ಲ.


# ಇಷ್ಟಲಿಂಗ ಪೂಜೆ ಮಾಡುವವರೆಲ್ಲ ಲಿಂಗಾಯತರು: ಖಂಡ್ರೆ

## ಅಖಿಲ ಭಾರತ ವೀರಶೈವ ಮಹಾಸಭಾ ಕಾರ್ಯಾಗಾರ | ಒಗ್ಗಟ್ಟಿನ ಮಂತ್ರ ಜಪಿಸಿದ ಮುಖಂಡರು

ಹಳೇಬೀಡು: ಅಂಗೈಯಲ್ಲಿ ಲಿಂಗ ಹಿಡಿದು ಇಷ್ಟಲಿಂಗ ಪೂಜೆ ಮಾಡುವ ಪ್ರತಿಯೊಬ್ಬರೂ ಲಿಂಗಾಯತ-ವೀರಶೈವರೇ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಹೇಳಿದರು.

ಹಳೇಬೀಡು ಬಳಿಯ ಪುಷ್ಪಗಿರಿಯ ಸಭಾಂಗಣದಲ್ಲಿ ಭಾನುವಾರ ನಡೆದ ಮೈಸೂರು ವಿಭಾಗ ಮಟ್ಟದ ವೀರಶೈವ ಲಿಂಗಾಯತ ಮಹಾಸಭಾ ಪದಾಧಿಕಾರಿಗಳ ಕಾರ್ಯಾಗಾರ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, 700 ಕೋ. ರೂ. ವೆಚ್ಚದಲ್ಲಿ ಕೂಡಲ ಸಂಗಮದಲ್ಲಿ ಸರ್ಕಾರದಿಂದ ಅನುಭವ ಮಂಟಪ ನಿರ್ಮಾಣ ಮಾಡುತ್ತಿದ್ದೇವೆ. ಈಗಾಗಲೇ 350 ಕೋಟಿ ರೂ. ಕೆಲಸ ಮಾಡಲಾಗಿದೆ ಎಂದರು.

ಪುಷ್ಪಗಿರಿ ಮಠದದಲ್ಲಿ ಹಮ್ಮಿಕೊಂಡಿರುವ ವೀರಶೈವ ಲಿಂಗಾಯತ ಮಹಾಸಭಾ ಮೈಸೂರು ವಿಭಾಗ ಮಟ್ಟದ ಕಾರ್ಯಾಗಾರ ಒಗ್ಗಟ್ಟಿನ



ಪ್ರತೀಕವಾಗಿದೆ. ಸಮಾಜದ ಅಭಿವೃದ್ಧಿಗೆ ನಾಂದಿ ಹಾಡಿದಂತಾಗಿದೆ ಎಂದರು.

**ಆನೆ ಹಾವಳಿ ನಿಯಂತ್ರಣಕ್ಕೆ ಕ್ರಮ**

ಮಾನವ ಜೀವ ಉಳಿಸುವುದು ಪ್ರಮುಖ ಕೆಲಸವಾಗಿದೆ. ವನ್ಯಜೀವಿ ದಾಳಿಯಿಂದ ಆಗುವ ಸಾವಿನ ಪ್ರಮಾಣವನ್ನು ನಿಯಂತ್ರಿಸಲಾಗಿದೆ. ಆನೆ ನಿಯಂತ್ರಣಕ್ಕೆ ರೈಲ್ವೇ ಬ್ಯಾರಿಕ್ಯಾಡ್ ಹಾಕಲಾಗಿದೆ. ಕಂದಕಗಳನ್ನು ನಿರ್ಮಿಸಲಾಗಿದೆ. ಆನೆ ಕಾರ್ಯಪಡೆ ಕಾರ್ಯ ನಿರ್ವಹಿಸುತ್ತಿದೆ. ಡ್ರೋನ್ ಮುಖಾಂತರ ಆನೆ ಚಲನವಲನ ಗಮನಿಸಲಾಗುತ್ತಿದೆ. ಆಮ್ಲಜನಕ ಸೇವೆಗಾಗಿ, ವನ್ಯಜೀವಿ ಹಾಗು ಮಾನವ ನೆಮ್ಮದಿ ಬದುಕಿಗಾಗಿ ಅರಣ್ಯದ ಪಾಲು ಹೆಚ್ಚಾಗಬೇಕಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದರು.

ವೀರಶೈವ-ಲಿಂಗಾಯತ ಮಹಾಸಭಾ ರಾಜ್ಯ ಘಟಕ ಅಧ್ಯಕ್ಷ ಶಂಕರ ಬಿದರಿ ಅವರು ಮಾತನಾಡಿ, ಪ್ರತಿ ವಿಭಾಗ ಜಿಲ್ಲಾ ಮಟ್ಟದಲ್ಲಿ ಮೈಸೂರು ವಿಭಾಗದಂತೆ ಕಾರ್ಯಾಗಾರ ನಡೆಯಬೇಕು. ಸಮಾಜದ ಸಾಧಕರಲ್ಲಿ ಪುಷ್ಪಗಿರಿ ಶ್ರೀಗಳಾದ ಸೋಮಶೇಖರ ಸ್ವಾಮೀಜಿ ಸಮಾಜದ ಏಳಿಗೆಗೆ ದುಡಿಯುತ್ತಿರುವವರಲ್ಲಿ ಮೊದಲಿಗರಾಗಿದ್ದಾರೆಂದರು.

**5 ನಿರ್ಣಯ ಮಂಡನೆ**

ವೀರಶೈವ - ಲಿಂಗಾಯತ ಮಹಾಸಭಾದಲ್ಲಿ ಎಲ್ಲಾ ಘಟಕಗಳನ್ನು ಪುನರುಜ್ಜೀವನಗೊಳಿಸಬೇಕು. ಜಾತಿ ಗಣತಿಯಲ್ಲಿ ಮಹಾಸಭಾದಂತೆ ಬರೆಸಬೇಕು. ಸಮಾಜಕ್ಕೆ ಮೀಸಲಿರುವ ಸರ್ಕಾರದ ಸೌಲಭ್ಯಗಳನ್ನು ಮಹಾಸಭಾದಿಂದ ಅರ್ಹರಿಗೆ ತಲುಪಿಸಬೇಕು. ಚುನಾವಣೆಯಲ್ಲಿ ವೀರಶೈವ ಲಿಂಗಾಯಿತ ಅಭ್ಯರ್ಥಿಗಳಿಗೆ ಸೀಟು ದೊರಕುವಂತೆ ಮಹಾಸಭಾ ನೋಡಿಕೊಳ್ಳಬೇಕೆಂದು ಕೈಗೊಂಡ ನಿರ್ಣಯವನ್ನು ಸಾಗರ ಹಳ್ಳಿ ನಟರಾಜ್ ಮಂಡಿಸಿದರು.

ಅರಕಲಗೂಡು ದೊಡ್ಡಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ, ಅಖಿಲ ಭಾರತ ವೀರಶೈವ ಮಹಾಸಭಾ ರಾಷ್ಟ್ರೀಯ ಕಾರ್ಯದರ್ಶಿ ರೇಣುಕಾ ಪ್ರಸನ್ನ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಪುಷ್ಪಗಿರಿ ಮಠದ ಆಡಳಿತಾಧಿಕಾರಿ ಚಟಚಟ್ಟಿಹಳ್ಳಿ ಕಿಟ್ಟಪ್ಪ, ವೀರಶೈವ ಲಿಂಗಾಯತ ಮಹಾಸಭಾ ಪ್ರಮುಖರಾದ ಸಾಗರನಹಳ್ಳಿ ನಟರಾಜ್, ವೀಣಾ ಕಾಶಂಪೂರ್, ವಿಕ್ರಂ ಕೌರಿ, ಗ್ರಾನೈಟ್ ರಾಜಶೇಖರ್, ಸಿ.ಎಂ. ನಿಂಗರಾಜ್, ಎ.ಎಸ್. ಬಸವರಾಜು, ಹೆಚ್.ಸಿ. ಚೇತನ್, ಗೆಂಡೇಹಳ್ಳಿ ಚೇತನ್, ಅದ್ದೂರಿ ಕುಮಾರ್ ಮುಂತಾದವರು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

# ರಾಹುಲ್ ಗಾಂಧಿಗೆ ಚುನಾವಣಾ ಆಯೋಗ ನೋಟೀಸ್

• ಪ್ರಜೋದಯ ವರದಿ

**ನವದೆಹಲಿ:** ಮಹಿಳೆಯೊಬ್ಬರು 2 ಬಾರಿ ಮತ ಚಲಾಯಿಸಿದ್ದಾರೆಂಬ ಆರೋಪಕ್ಕೆ ಸಂಬಂಧಿಸಿ ಸೂಕ್ತ ದಾಖಲೆ ನೀಡುವಂತೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ನೋಟೀಸ್ ಜಾರಿ ಮಾಡಿದ್ದಾರೆ.

ರಾಹುಲ್ ಗಾಂಧಿ ಅವರು ದಾಖಲೆಗಳನ್ನು ಸಲ್ಲಿಸಿದರೆ ತನಿಖೆ ನಡೆಸಲು ಸಹಾಯವಾಗುತ್ತದೆ. ಶಕುನ್ ರಾಣಿ ಎರಡು ಬಾರಿ ಮತ ಚಲಾಯಿಸಿದ್ದಾರೆ ಎಂದು ನೀವು ಹೇಳಿದ್ದೀರಿ, ವಿಚಾರಣೆಯಲ್ಲಿ, ಶಕುನ್ ರಾಣಿ ಅವರು ನೀವು ಆರೋಪಿಸಿದಂತೆ ಎರಡು ಬಾರಿ ಅಲ್ಲ, ಒಮ್ಮೆ ಮಾತ್ರ ಮತ ಚಲಾಯಿಸಿದ್ದಾರೆಂದು ಚುನಾವಣಾಧಿಕಾರಿ ನೋಟೀಸ್‌ನಲ್ಲಿ ಹೇಳಿದ್ದಾರೆ.



ಸಿಇಒ ಕಚೇರಿ ನಡೆಸಿದ ಪ್ರಾಥಮಿಕ ವಿಚಾರಣೆಯಲ್ಲಿ ರಾಹುಲ್ ಗಾಂಧಿಯವರು ಪ್ರಸ್ತುತಿಯಲ್ಲಿ ತೋರಿಸಿದ ಟಿಕ್-ಮಾರ್ಕ್ ಮಾಡಿದ ದಾಖಲೆಯನ್ನು ಮತಗಟ್ಟೆ ಅಧಿಕಾರಿ ನೀಡಿಲ್ಲ ಎಂದು ತಿಳಿದುಬಂದಿದೆ. ಆದ್ದರಿಂದ ಶಕುನ್ ರಾಣಿ ಅಥವಾ ಬೇರೆ ಯಾರಾದರೂ ಎರಡು ಬಾರಿ ಮತ ಚಲಾಯಿಸಿ ದ್ದಾರೆಂದು ನೀವು ತೀರ್ಮಾನಿಸಿರುವ ಸಂಬಂಧಿತ ದಾಖಲೆಗಳನ್ನು ಒದಗಿಸಿ ಎಂದು ಹೇಳಲಾಗಿದೆ.

# ಧಾರ್ಮಿಕ ಕ್ಷೇತ್ರಕ್ಕೆ ಪೆಟ್ಟು: ಕಿಡಿಗೇಡಿಗಳಿಗೆ ಪಾಠ ಕಲಿಸಬೇಕು

• ಪ್ರಜೋದಯ ವರದಿ

**ಸಕಲೇಶಪುರ :** ಧರ್ಮಸ್ಥಳ ಕ್ಷೇತ್ರದ ಕುರಿತು ಅಪಪ್ರಚಾರ ಮಾಡುತ್ತಾ ಧಾರ್ಮಿಕ ಪರಂಪರೆಗೆ ಪೆಟ್ಟು ನೀಡುತ್ತಿರುವವರಿಗೆ ತಕ್ಕ ಪಾಠ ಕಲಿಸಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಪಟ್ಟಣದ ಸಕಲೇಶ್ವರಸ್ವಾಮಿ ದೇವಸ್ಥಾನ ಆವರಣದಲ್ಲಿ ಭಾನುವಾರ ರಾಮದೂತ ಗಣಪತಿ ಸೇವಾ ಸಮಿತಿಯ ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಅವರು, ನಮ್ಮ ಧರ್ಮ, ಸಂಸ್ಕೃತಿಯ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯ. ಹಿಂದೂ ಧರ್ಮ ಹಾಗು ಪವಿತ್ರ ಸ್ಥಳ, ವ್ಯಕ್ತಿಗಳ ಮೇಲೆ ನಿರಂತರವಾಗಿ ಅಪಪ್ರಚಾರ ಮಾಡಲಾಗುತ್ತಿದೆ. ಅದರಲ್ಲೂ ಧರ್ಮಸ್ಥಳ ಕ್ಷೇತ್ರ ಹಾಗು ಧರ್ಮಾಧಿಕಾರಿಗಳ ವಿರುದ್ಧ ವ್ಯವಸ್ಥಿತ ಪಿತೂರಿ ನಡೆಯುತ್ತಿದೆ. ಇಂತಹ ಷಡ್ಯಂತ್ರದ ವಿರುದ್ಧ ನಾವೆಲ್ಲರೂ ಒಟ್ಟಾಗಿ ಹೋರಾಡಬೇಕಿದೆ. ಸಮಾಜಘಾತುಕರಿಗೆ ತಕ್ಕ ಪಾಠ ಕಲಿಸಬೇಕೆಂದರು.

ಪ್ರತಿವರ್ಷ ಪಟ್ಟಣದಲ್ಲಿ ರಾಮದೂತ ಗಣಪತಿ ಸೇವಾ ಸಮಿತಿ ವತಿಯಿಂದ ಗಣಪತಿ ಪ್ರತಿಷ್ಠಾಪನೆ ಮಾಡಲಾಗುತ್ತದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದರು.



ಹಿಂದೂ ಹಿತರಕ್ಷಣಾ ವೇದಿಕೆ ರಾಜ್ಯ ಮುಖಂಡ ರಘು ಸಕಲೇಶಪುರ ಅವರು ಮಾತನಾಡಿ, ಧರ್ಮಸ್ಥಳದ ಮೇಲೆ ನಡೆಯುತ್ತಿರುವ ಅಪಪ್ರಚಾರ ಕೂಡಲೇ ನಿಲ್ಲದಿದ್ದರೆ ಸಕಲೇಶಪುರದಿಂದ ಧರ್ಮಸ್ಥಳಕ್ಕೆ ಪಾದಯಾತ್ರೆ ಹಮ್ಮಿಕೊಳ್ಳಲಾಗುವುದು. ಕ್ಷೇತ್ರದ ವಿರುದ್ಧ ಸುಳ್ಳು ಸುದ್ದಿ ಹಬ್ಬಿಸುತ್ತಿರುವವರಿಗೆ ಸರ್ಕಾರ ಕಡಿವಾಣ ಹಾಕಬೇಕೆಂದರು. ಬಿಜೆಪಿ ಮುಖಂಡರು, ಮತ್ತಿತರರು ಇದ್ದರು.

# ಕರ್ನಾಟಕ ರೈಲ್ವೆ ಬಜೆಟ್ ಮೊತ್ತ 7,500 ಕೋ. ರೂ.

• ಪ್ರಜೋದಯ ವರದಿ

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿಯವರು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ನಂತರ ಕರ್ನಾಟಕದ ರೈಲ್ವೆ ಬಜೆಟ್ 9 ಪಟ್ಟು ಏರಿಕೆಯಾಗಿದೆ ಎಂದು ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಭಾನುವಾರ ಮಾತನಾಡಿದ ಅವರು, 2014ರಲ್ಲಿ ಕರ್ನಾಟಕದ ರೈಲ್ವೆ ಬಜೆಟ್ 835 ಕೋಟಿ ರೂ. ಆಗಿತ್ತು. ಇದೀಗ 7,500 ಕೋ.ರೂ. ಬಜೆಟ್‌ನ್ನು ಪ್ರಧಾನಿ ಮೋದಿ ಕರ್ನಾಟಕಕ್ಕೆ ನೀಡಿದ್ದಾರೆ. ಕರ್ನಾಟಕದಂತಹ ಪ್ರಮುಖ ರಾಜ್ಯದಲ್ಲಿನ ರೈಲ್ವೆ ಅಭಿವೃದ್ಧಿಗೆ ಹಿಂದಿನ ಸರ್ಕಾರಗಳು ಸರಿಯಾದ ಯೋಜನೆಗಳನ್ನು ರೂಪಿಸಿರಲಿಲ್ಲ. ಆದರೆ, ಇದೀಗ 54 ಸಾವಿರ ಕೋಟಿ ಮೊತ್ತದ ಯೋಜನೆಗಳು ಸಿದ್ಧವಾಗಿವೆ. ಅಮೃತ್ ಭಾರತ ಯೋಜನೆಯಡಿಯಲ್ಲಿ 61 ರೈಲ್ವೆ ನಿಲ್ದಾಣಗಳನ್ನು ಪುನರಾಭಿವೃದ್ಧಿ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಪರೀಕ್ಷೆ ಮೂರರ ಫಲಿತಾಂಶ ಪ್ರಕಟ | 17,519 ವಿದ್ಯಾರ್ಥಿಗಳು ಉತ್ತೀರ್ಣ

# ಎಸ್‌ಎಸ್‌ಎಲ್‌ಸಿ ಫಲಿತಾಂಶ: 3ನೇ ಸ್ಥಾನಕ್ಕೇರಿದ ಹಾಸನ

• ಪ್ರಜೋದಯ ವರದಿ

**ಹಾಸನ:** ಎಸ್‌ಎಸ್‌ಎಲ್‌ಸಿ 2024-25ನೇ ಸಾಲಿನ ಪರೀಕ್ಷೆಯಲ್ಲಿ ಎ ಗ್ರೇಡ್ ಪಡೆಯುವ ಮೂಲಕ ಹಾಸನ ಜಿಲ್ಲೆ ರಾಜ್ಯಕ್ಕೆ ಮೂರನೇ ಸ್ಥಾನ ಪಡೆದಿದೆ.

2025ರ ಮೇ 2ರಂದು ಪ್ರಕಟವಾದ ಪರೀಕ್ಷೆ 1ರ ಫಲಿತಾಂಶದಲ್ಲಿ ಶೇ. 82.12 ಫಲಿತಾಂಶದ ಮೂಲಕ 6ನೇ ಸ್ಥಾನ ಪಡೆದಿತ್ತು. ನಂತರ ನಡೆದ ಪರೀಕ್ಷೆ 2 ಮತ್ತು 3ರ ಫಲಿತಾಂಶ ಇತ್ತೀಚೆಗೆ ಪ್ರಕಟವಾಗಿದ್ದು ಗುಣಮಟ್ಟ ಹಾಗು ಉತ್ತೀರ್ಣ ವಿದ್ಯಾರ್ಥಿಗಳ ಸಂಖ್ಯೆ ಪರಿಗಣಿಸಿ ಶೇ. 77.32 ಫಲಿತಾಂಶದೊಂದಿಗೆ ಎ ಶ್ರೇಣಿಗೆ ಭಾಜನವಾಗಿದೆ. ಶೇ. 82.08 ಅಂಕಗಳೊಂದಿಗೆ ಉಡುಪಿ ಹಾಗು ದಕ್ಷಿಣ ಕನ್ನಡ ಶೇ. 82.03 ಫಲಿತಾಂಶದ ಮೂಲಕ ಪ್ರಥಮ, ದ್ವಿತೀಯ ಸ್ಥಾನ ಪಡೆದಿವೆ. ಹಾಸನ ಹಾಗು ಶಿವಮೊಗ್ಗಾ ಜಿಲ್ಲೆಗಳು ಎ ಶ್ರೇಣಿಯೊಂದಿಗೆ ಮೂರನೇ ಸ್ಥಾನವನ್ನು ಖಾತ್ರಿ ಮಾಡಿಕೊಂಡಿವೆ. ಒಟ್ಟು 19285 ವಿದ್ಯಾರ್ಥಿಗಳು ಪರೀಕ್ಷೆ ಬರೆದು 17519 ಮಕ್ಕಳು ಪಾಸಾಗಿದ್ದಾರೆ. ಉತ್ತೀರ್ಣರ ಶೇಕಡಾವಾರು ಫಲಿತಾಂಶದಲ್ಲಿ ಶೇ. 90 ಹಾಗು ಗುಣಮಟ್ಟದಲ್ಲಿ ಶೇ. 77.32 ಅಂಕಗಳನ್ನು ಹಾಸನ ಜಿಲ್ಲೆ ಪಡೆದಿದೆ. ಪರೀಕ್ಷೆ 2 ಹಾಗು 3ರಲ್ಲಿ ಉತ್ತಮ ಅಂಕ ಗಳಿಸಲೇಬೇಕೆಂಬ ಉದ್ದೇಶದಿಂದ ನಡೆಸಿದ ಅವಿರತ ಪ್ರಯತ್ನಗಳು ಫಲ ನೀಡಿದ್ದು ಶಿಕ್ಷಣ ಇಲಾಖೆ ಅಧಿಕಾರಿಗಳು ಸಂತಸಗೊಂಡಿದ್ದಾರೆ. ಮೇ 26 ರಿಂದ ಪರೀಕ್ಷೆ 2 ಹಾಗು ಜೂನ್‌ನಲ್ಲಿ ಪರೀಕ್ಷೆ 3 ನಡೆಸಲಾಗಿತ್ತು.

**3441 ವಿದ್ಯಾರ್ಥಿಗಳ ಮೇಲೆ ನಿಗಾ**

ಪರೀಕ್ಷೆ ಬರೆದಿದ್ದ 19248 ವಿದ್ಯಾರ್ಥಿಗಳಲ್ಲಿ 15807 ಮಕ್ಕಳು ಉತ್ತೀರ್ಣರಾಗಿ 3441 ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದರು. ಪರೀಕ್ಷೆ 2 ಮತ್ತು 3ಕ್ಕೆ ಈ ವಿದ್ಯಾರ್ಥಿಗಳನ್ನು ಸಿದ್ಧಗೊಳಿಸುವುದು ಶಿಕ್ಷಕರಿಗೂ ಸವಾಲಿನ ಕೆಲಸವಾಗಿತ್ತು. ಮೇ 2 ರಂದು



ಪರೀಕ್ಷಾ ಫಲಿತಾಂಶ ಪ್ರಕಟವಾಗುತ್ತಿದ್ದಂತೆ ವಿಶೇಷ ಯೋಜನೆ ಹಾಕಿಕೊಂಡ ಹಿಂದಿನ ಸಾರ್ವಜನಿಕ ಶಿಕ್ಷಣ ಇಲಾಖೆ ಪ್ರಭಾರ ಉಪ ನಿರ್ದೇಶಕ ಹೆಚ್.ಎಸ್.ಚಂದ್ರಶೇಖರ್ ಅವರು ಶಿಕ್ಷರಿಗೆ ರಜೆ ಕಡಿತಗೊಳಿಸಿ ತರಗತಿಗೆ ಹಾಜರಾಗುವಂತೆ ಸೂಚಿಸಿದ್ದರು. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಹೆಚ್ಚುವರಿ ತರಗತಿ ನಡೆಸುವಂತೆ ಆದೇಶ ಹೊರಡಿಸಿದ್ದರು.

ಮಗು ಯಾವ ವಿಷಯ ಕಲಿಕೆಯಲ್ಲಿ ಹಿಂದುಳಿದಿದೆ ಎಂಬುದನ್ನು ಪರಿಗಣಿಸಿ ಒತ್ತು ಕೊಟ್ಟು ಕಲಿಸಲಾಗಿತ್ತು. ಸಂಪನ್ಮೂಲ ವ್ಯಕ್ತಿಗಳಿಂದ ಮತ್ತೊಮ್ಮೆ ಪಾಠಗಳ ಪುನರ್ ಮನನ, ಚಟುವಟಿಕೆ ನೀಡಿ ಪರೀಕ್ಷೆಗೆ ಸನ್ನದ್ಧಗೊಳಿಸಲಾಗಿತ್ತು. ಬಹುತೇಕ ಗ್ರಾಮೀಣ ವಿದ್ಯಾರ್ಥಿಗಳು ಮೊದಲ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿದ್ದರಿಂದ ಪರೀಕ್ಷೆ 2 ಮತ್ತು 3ಕ್ಕೆ ನಿರಾಸಕ್ತಿ ತೋರಿದ್ದರು. ಬಾಲಕಿಯರಂತು ನಮಗೆ ಶಾಲೆಯ ಸಹವಾಸವೇ ಬೇಡವೆಂದು ದೂರವುಳಿದಿದ್ದರು. ಅಂತವರ ಮನೆಗಳಿಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರೀಕ್ಷೆಗೆ ಅಣಿಗೊಳಿಸುವಲ್ಲಿ ಅವಿರತ ಶ್ರಮ ಹಾಕಿದ್ದರು.

**ತಾಲ್ಲೂಕುವಾರು ಎಸ್‌ಎಸ್‌ಎಲ್‌ಸಿ ಫಲಿತಾಂಶ ವಿವರ**

| ತಾಲ್ಲೂಕು | ಪರೀಕ್ಷಾರ್ಥಿಗಳು | ಉತ್ತೀರ್ಣ | ಅನುತ್ತೀರ್ಣ |
|---|---|---|---|
| ಸಕಲೇಶಪುರ | 1202 | 1124 | 78 |
| ಆಲೂರು | 940 | 827 | 113 |
| ಅರಸೀಕೆರೆ | 3402 | 2905 | 497 |
| ಹಾಸನ | 4581 | 3788 | 793 |
| ಅರಕಲಗೂಡು | 2211 | 1825 | 386 |
| ಬೇಲೂರು | 1892 | 1523 | 369 |
| ಚನ್ನರಾಯಪಟ್ಟಣ | 2866 | 2194 | 672 |
| ಹೊಳೆನರಸೀಪುರ | 2154 | 1621 | 533 |

**ಮುಂದಿನ ವರ್ಷಕ್ಕೆ ಈಗಿನಿಂದಲೇ ಸಿದ್ಧತೆ**

2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಈಗಿನಿಂದಲೇ ಸಾರ್ವಜನಿಕ ಶಿಕ್ಷಣ ಇಲಾಖೆ ಸಿದ್ಧತೆ ನಡೆಸುತ್ತಿದ್ದು, ಕಿರು ಪರೀಕ್ಷೆಗಳ ಮೂಲಕ ಮಕ್ಕಳ ವ್ಯಾಸಂಗದಲ್ಲಿ ಸುಧಾರಣೆ ತರಲು ಪ್ರಯತ್ನಿಸುತ್ತಿದೆ. ಪ್ರತಿ ಮೂರು ಪಾಠಕ್ಕೊಂದು ಕಿರು ಪರೀಕ್ಷೆ ನಡೆಸಲಾಗುತ್ತಿದೆ. ಮೊದಲ ಪರೀಕ್ಷೆಯಲ್ಲಿ ಕಡಿಮೆ ಅಂಕ ಗಳಿಸಿದ ವಿದ್ಯಾರ್ಥಿ 2ನೇ ಪರೀಕ್ಷೆಯಲ್ಲಿ ಕಡಿಮೆ ಅಂಕ ಗಳಿಸಿದ್ದರೆ ಅದಕ್ಕೆ ಕಾರಣ ಹುಡುಕಿ ಪರಿಹಾರ ಕಂಡುಕೊಳ್ಳಲಾಗುತ್ತಿದೆ. ತಿಂಗಳಿಗೊಮ್ಮೆ ತಾಯಂದಿರ ಸಭೆ, ಮನೆ ಮನೆ ಭೇಟಿ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಪ್ರಗತಿ ಪರಿಶೀಲನೆಯನ್ನು ಪ್ರತಿ ಶಾಲೆಯಲ್ಲೂ ಮಾಡಲಾಗುತ್ತಿದ್ದು, ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಹಾಸನ ಮೊದಲ ಸ್ಥಾನದಲ್ಲಿರಬೇಕೆಂಬುದು ಅಧಿಕಾರಿಗಳ ಗುರಿಯಾಗಿದೆ.

# ಇಂಡಿಯಾ ಬಣದ ಸಂಸದರಿಗೆ ಖರ್ಗೆ ಭೋಜನಕೂಟ

• ಪ್ರಜೋದಯ ವರದಿ

**ನವದೆಹಲಿ:** ಸದ್ಯ ನಡೆಯುತ್ತಿರುವ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಮತ್ತು ಚುನಾವಣಾ ಅಕ್ರಮ ಆರೋಪದ ವಿರುದ್ಧ ವಿರೋಧ ಪಕ್ಷಗಳು ಸಂಘಟಿತ ಹೋರಾಟ ನಡೆಸುತ್ತಿರುವಂತೆಯೇ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸೋಮವಾರ ಇಂಡಿಯಾ ಬಣದ ಸಂಸದರಿಗೆ ಭೋಜನಕೂಟ ಆಯೋಜಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಚುನಾವಣೆ ವಂಚನೆ ವಿಷಯದ ಕುರಿತು ವಿರೋಧ ಪಕ್ಷದ ನಾಯಕರು ಮತ್ತು ಸಂಸದರು ಸೋಮವಾರ ಸಂಸತ್ತಿನಿಂದ ಚುನಾವಣಾ ಆಯೋಗದ ಕಚೇರಿಗೆ ಪ್ರತಿಭಟನಾ ಮೆರವಣಿಗೆಯನ್ನು ನಡೆಸಲಿದ್ದಾರೆ.

ಅದೇ ದಿನ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಖರ್ಗೆ ಅವರು ಚಾಣಕ್ಯಪುರಿಯಲ್ಲಿರುವ ಹೋಟೆಲ್ ತಾಜ್ ಪ್ಯಾಲೇಸ್ ನಲ್ಲಿ ಇಂಡಿಯಾ ಬಣದ ಸಂಸದರಿಗೆ ಆತಿಥ್ಯ ನೀಡಲಿದ್ದಾರೆಂದು ಮೂಲಗಳು ತಿಳಿಸಿವೆ.

# ಗುರುರಾಯರ ಆರಾಧನಾ ಮಹೋತ್ಸವ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಪಟ್ಟಣದ ಕೋಟೆ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ಗುರುಗಳ 354ನೇ ಆರಾಧನಾ ಮಹೋತ್ಸವದ ಪ್ರಯುಕ್ತ ಭಾನುವಾರ ರಾಯರ ಪೂರ್ವಾರಾಧನೆ ಭಕ್ತಿಪೂರ್ವಕವಾಗಿ ನಡೆಯಿತು.

ಆರಾಧನೆ ಹಿನ್ನಲೆಯಲ್ಲಿ ಶ್ರೀ ಮಠದ ಪ್ರಾಂಗಣ ಹಾಗು ಮುಂಭಾಗ ತರಹೇವಾರಿ ಬಣ್ಣಗಳ ವಿದ್ಯುತ್ ದೀಪ ಮತ್ತು ಹೂವಿನ ಅಲಂಕಾರ ಮಾಡಲಾಗಿತ್ತು. ಶ್ರೀ ಮಠಕ್ಕೆ ತಾಲ್ಲೂಕಿನ ವಿವಿಧೆಡೆಗಳಿಂದ ಭಕ್ತ ಸಮೂಹ ಆಗಮಿಸಿ ಗುರುದರ್ಶನ ಪಡೆಯಿತು.



ರಾಯರ 354ನೇ ಆರಾಧನಾ ಪೂರ್ವಾರಾಧನೆ ನಿಮಿತ್ತ ಬೆಳಿಗ್ಗೆ 6.30ಕ್ಕೆ ಉಷಾಕಾಲ ಪೂಜೆ ಧಾರ್ಮಿಕ ಕಾರ್ಯಗಳು ಆರಂಭವಾದವು. ಪಂಚಾಮೃತ ಅಭಿಷೇಕ ನಂತರ ಪಾದಪೂಜೆ ಸೇವೆ, ಮಹಾಮಂಗಳಾರತಿ ಇನ್ನಿತರ ಧಾರ್ಮಿಕ ಕಾರ್ಯಗಳು ವಿಧಿವತ್ತಾಗಿ ಸಂಪನ್ನಗೊಂಡವು.

ಸಂಜೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭರತನಾಟ್ಯ, ನಾದಸ್ವರ ಕಾರ್ಯಕ್ರಮ ನೆರವೇರಿತು. ಬಳಿಕ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಜರಗಿತು. ಶ್ರೀ ಮಠಕ್ಕೆ ಭಕ್ತರು ಶ್ರದ್ಧಭಕ್ತಿಪೂರ್ವಕವಾಗಿ ನಮನ ಸಲ್ಲಿಸಿ ಗುರುಗಳ ದರ್ಶನ ಪಡೆಯುವ ಮೂಲಕ ಪುನೀತರಾದರು.

# ಹಿಂದೂ ಧರ್ಮವು ಅತ್ಯಂತ ಶ್ರೇಷ್ಠ ಧರ್ಮ

• ಪ್ರಜೋದಯ ವರದಿ

**ಸಕಲೇಶಪುರ:** ಹಿಂದೂ ಧರ್ಮವು ಅತ್ಯಂತ ಶ್ರೇಷ್ಠ ಧರ್ಮವಾಗಿದೆ ಎಂದು ಪ್ರಾಂತ ಮಂದಿರ ಅರ್ಚಕ ಹಾಗೂ ಪುರೋಹಿತ ಪ್ರಮುಖರಾದ ಪ್ರೇಮಾನಂದ ಶೆಟ್ಟಿ ಅವರು ಹೇಳಿದರು.

ಪಟ್ಟಣದ ಪುರಭವನದಲ್ಲಿ ವಿಶ್ವ ಹಿಂದೂ ಪರಿಷತ್ ಸ್ಥಾಪನಾ ದಿನ ಹಾಗೂ ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ವಿ.ಹಿಂ.ಪ. ಹಾಗೂ ಭಜರಂಗದಳ ವತಿಯಿಂದ ಪುಟಾಣಿ ಮಕ್ಕಳಿಗೆ ಆಯೋಜಿಸಲಾಗಿದ್ದ ರಾಧಾ-ಕೃಷ್ಣ ವೇಷಧಾರಿಗಳ ಸ್ಪರ್ಧಾ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿ, ಸನಾತನ ಹಿಂದೂ ಧರ್ಮವು ಬೇರೆ ಎಲ್ಲ ಧರ್ಮಗಳಿಗಿಂತ ಶ್ರೇಷ್ಠತೆಯನ್ನು ಹೊಂದಿದೆ. ಆಕಾಶದ ಬಣ್ಣ ಹೇಗೆ ನೀಲಿ ಬಣ್ಣವಾಗಿದೆಯೋ, ಸಮುದ್ರದ ಆಳದ ಬಣ್ಣ ಹೇಗೆ ನೀಲಿ ಆಗಿದೆಯೋ, ಹಾಗೆಯೇ ಶ್ರೀಕೃಷ್ಣನ ಜ್ಞಾನದ ಆಳವೂ ಅಷ್ಟೇ ಅಪಾರವಾಗಿದೆ ಎಂದರು.



ಕಲಿಯುಗದ ಶಾಂತಿಗೆ ಆತನ ಸಂದೇಶ ಭಗವದ್ಗೀತೆಯೇ ಸಾಕ್ಷಿಯಾಗಿದೆ. ಪ್ರತಿಯೊಬ್ಬ ಪುಟಾಣಿಯೂ ಕೃಷ್ಣನ ವೇಷ ಧರಿಸುವುದಲ್ಲದೆ, ಕೃಷ್ಣನ ಸಂದೇಶವನ್ನು ತಮ್ಮೊಳಗೆ ಅಳವಡಿಸಿಕೊಳ್ಳಬೇಕು. ಇತ್ತೀಚಿನ ದಿನಗಳಲ್ಲಿ ಕೃಷ್ಣನನ್ನು ತಪ್ಪಾಗಿ ಅರ್ಥೈಸಲಾಗುತ್ತಿದೆ. ಕೃಷ್ಣ ಚೋರ, ನಾರಿಯರ ಸೀರೆಯನ್ನು ಕದ್ದ ಎಂದು ಕೆಲವು ಸಾಹಿತ್ಯಗಳಲ್ಲಿ ಬರೆದು ಅಪಪ್ರಚಾರ ಮಾಡಿದ್ದಾರೆ. ಆದರೆ ಕೃಷ್ಣ ಸಾರ್ವಜನಿಕ ಸ್ಥಳದಲ್ಲಿ ಮಹಿಳೆಯರು ನಿಲ್ಲಬಾರದು ಎಂಬ ಎಚ್ಚರಿಕೆ ನೀಡುವುದರ ಮೂಲಕ ಸಂದೇಶ ನೀಡಿದರು ಎಂದು ತಿಳಿಸಿದರು.

ತೆಂಕಲಗೋಡು ಮಠದ ಚನ್ನ ಸಿದ್ದೇಶ್ವರ ಸ್ವಾಮೀಜಿ ಮಾತನಾಡಿ, ಹಿಂದೂ ಧರ್ಮ ಅತ್ಯಂತ ಸನಾತನ ಧರ್ಮವಾಗಿದೆ. ಬಾಲ್ಯದಲ್ಲೇ ತಾಯಂದಿರು ಮಕ್ಕಳಿಗೆ ಧರ್ಮದ ಬಗ್ಗೆ ಅರಿವು ಮೂಡಿಸಬೇಕು. ಆಗ ಮಾತ್ರ ಮಕ್ಕಳು ಸಂಸ್ಕೃತಿ ಕುರಿತು ಅರಿವು ಹೊಂದಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಧರ್ಮ ಉಳಿಯಲು ರಾಮಾಯಣ, ಮಹಾಭಾರತ, ಕೃಷ್ಣನ ಲೀಲೆಗಳನ್ನು ಪ್ರತಿಯೊಬ್ಬರೂ ಓದಬೇಕು. ತಾಯಂದಿರು ಮಕ್ಕಳಿಗೆ ಅದರಲ್ಲಿರುವ ಕಥೆಗಳನ್ನು ಹೇಳಬೇಕು. ನಾವೆಲ್ಲರು ಪುಣ್ಯವಂತರು, ಏಕೆಂದರೆ ನಮ್ಮ ಕಾಲದಲ್ಲಿಯೇ ಅಯೋಧ್ಯೆಯಲ್ಲಿ ಶ್ರೀರಾಮನ ಮಂದಿರದ ನಿರ್ಮಾಣ ಹಾಗೂ ರಾಮಲಲ್ಲನ ದೇವರ ದರ್ಶನ ಭಾಗ್ಯ ದೊರಕಿದೆ. ಜಗತ್ತಿಗೆ ಸಂಸ್ಕಾರ ಹಾಗೂ ಸಂಸ್ಕೃತಿ ಹೇಳಿಕೊಟ್ಟ ದೇಶ ಇದ್ದರೆ ಅದು ಭಾರತ ಮಾತ್ರ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಇಂದು ಭಾರತ ಪ್ರಪಂಚದಲ್ಲೇ ವಿಶ್ವಗುರುವಾಗುತ್ತಿದೆ. ಸುಮಾರು 144ಕ್ಕೂ ಹೆಚ್ಚು ರಾಷ್ಟ್ರಗಳಲ್ಲಿ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಹಿಂದೂಗಳು ಒಗ್ಗಟ್ಟಾದಲ್ಲಿ ಮಾತ್ರ ಧರ್ಮ ಹಾಗೂ ದೇಶದ ಉಳಿವು ಸಾಧ್ಯ. ಈ ನಿಟ್ಟಿನಲ್ಲಿ ಎಲ್ಲರೂ ಹಿಂದೂ ಸಂಘಟನೆಗಳ ಜೊತೆ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿ.ಹಿಂ.ಪ. ಜಿಲ್ಲಾಧ್ಯಕ್ಷ ಅನುಪ್, ಜಿಲ್ಲಾ ಸಹ ಕಾರ್ಯದರ್ಶಿ ಕರಡಿಗಾಲ ಹರೀಶ್, ತಾಲೂಕು ಅಧ್ಯಕ್ಷ ಬಾಲಕೃಷ್ಣ ಬಿರಡಹಳ್ಳಿ, ಉಪಾಧ್ಯಕ್ಷ ಜಯ್ ಕುಮಾರ್ ಬಾಳೆಗದ್ದೆ, ಸಂಘಟನೆಯ ಪ್ರಮುಖರಾದ ಕಿಶೋರ್ ಶೆಟ್ಟಿ, ರತೇಜಾ ಬೈಲಹಳ್ಳಿ, ಕೃಷ್ಣುರಾವ್, ರವಿ ಹಾರ್ಲೆಕೂಡಿಗೆ, ಸುರೇಶ್ ಹೆತ್ತೂರು ಉಪಸ್ಥಿತರಿದ್ದರು.

# ಭಾರತದ ಅಭಿವೃದ್ಧಿಯನ್ನು ಸಹಿಸಲಾಗುತ್ತಿಲ್ಲ

## ದೇಶ ಅಶ್ವ ಶಕ್ತಿಯಾಗುವುದನ್ನು ಯಾರೂ ತಡೆಯಲಾರರು: ಟ್ರಂಪ್‌ಗೆ ರಾಜನಾಥ್‌ಸಿಂಗ್ ಟಾಂಗ್

• ಪ್ರಜೋದಯ ವರದಿ

**ರಾಯ್‌ಸೆನ್:** ಭಾರತದ ಆರ್ಥಿಕತೆ ವಿಶ್ವದ ಅತ್ಯಂತ ಚುರುಕಾದ ಹಾಗೂ ಕ್ರಿಯಾತ್ಮಕ ಎಂದು ಬಣ್ಣಿಸಿರುವ ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್, ನಾವು ಎಲ್ಲರಿಗೂ ಬಾಸ್ ಎಂಬ ಮನೋಭಾವ ಹೊಂದಿರುವವರಿಗೆ ಇದನ್ನು ಒಪ್ಪಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಅಮೆರಿಕಕ್ಕೆ ಪರೋಕ್ಷವಾಗಿ ತಿರುಗೇಟು ನೀಡಿದ್ದಾರೆ.



ರಷ್ಯಾದಿಂದ ತೈಲ ಖರೀದಿಸುತ್ತಿರುವ ಭಾರತದ ಮೇಲೆ ಹೆಚ್ಚುವರಿ ಶೇ. 25 ದಂಡ ಸೇರಿದಂತೆ ಒಟ್ಟಾರೆಯಾಗಿ ಭಾರತದ ಸರಕುಗಳ ಮೇಲೆ ಅಮೆರಿಕ ಶೇ 50ರಷ್ಟು ಸುಂಕ ವಿಧಿಸಿತ್ತು. ಮಧ್ಯಪ್ರದೇಶದ ರಾಯ್ ಸೆನ್ ಜಿಲ್ಲೆಯಲ್ಲಿ ಭಾರತ್ ಅರ್ಥ್ ಮೂವರ್ಸ್ ಲಿಮಿಟೆಡ್‌ನ (ಬಿಇಎಂಎಲ್) ರೈಲು ಬೋಗಿ ನಿರ್ಮಾಣ ಘಟಕದ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದ ರಾಜನಾಥ, ಭಾರತವು ಅತ್ಯಂತ ವೇಗವಾಗಿ ಬೆಳವಣಿಗೆ ಸಾಧಿಸುತ್ತಿದ್ದು, ಜಾಗತಿಕವಾಗಿ ಅಶ್ವ ಶಕ್ತಿಯಾಗುವುದನ್ನು ಜಗತ್ತಿನ ಯಾವುದೇ ಶಕ್ತಿಯಿಂದಲೂ ತಡೆಯಲು ಸಾಧ್ಯವಿಲ್ಲ ಎಂದಿದ್ದಾರೆ.

ಭಾರತದ ತ್ವರಿತ ಬೆಳವಣಿಗೆಯನ್ನು ಕೆಲವರಿಗೆ ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಅಮೆರಿಕವನ್ನು ಉಲ್ಲೇಖಿಸದೆಯೇ ರಾಜನಾಥ ಟೀಕೆ ಮಾಡಿದ್ದಾರೆ. ನಾವೇ ಎಲ್ಲರಿಗೂ ಬಾಸ್ ಎಂದು ಅವರು ಭಾವಿಸುತ್ತಾರೆ. ಭಾರತಕ್ಕೆ ಕ್ಷಿಪ್ರ ಬೆಳವಣಿಗೆ ಹೇಗೆ ಸಾಧ್ಯ? ಅದಕ್ಕಾಗಿ ಏನಾದರೂ ಮಾಡಲು ಯತ್ನಿಸುತ್ತಾರೆ. ಭಾರತದ ಉತ್ಪನ್ನಗಳನ್ನು ವಿದೇಶಗಳಲ್ಲಿ ದುಬಾರಿಯಾಗುವಂತೆ ಮಾಡುತ್ತಾರೆ ಎಂದಿದ್ದಾರೆ.

2014ರಲ್ಲಿ ಭಾರತದ ಆರ್ಥಿಕತೆ 11ನೇ ಸ್ಥಾನದಲ್ಲಿತ್ತು. ಈಗ ಅಗ್ರ 4ಕ್ಕೆ ಲಗ್ಗೆ ಇಟ್ಟಿದೆ. ವಿಶ್ವದಲ್ಲೇ ಕ್ಷಿಪ್ರಗತಿಯಲ್ಲಿ ಬೆಳವಣಿಗೆ ಸಾಧಿಸುತ್ತಿರುವ ರಾಷ್ಟ್ರ ಭಾರತವಾಗಿದೆ ಎಂದು ಅವರು ಉಲ್ಲೇಖಿಸಿದ್ದಾರೆ.

# ಸೇನೆಯ ಪರಾಕ್ರಮ ಪ್ರಶ್ನಿಸಿ ಘನತೆ ಕೆಡಿಸಿಕೊಂಡ ರಾಗಾ

• ಪ್ರಜೋದಯ ವರದಿ

**ನವದೆಹಲಿ:** ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿರುವ ರಾಹುಲ್ ಗಾಂಧಿ ಅವರು ಭಾರತೀಯ ವಾಯುಪಡೆ ಮತ್ತು ಸಂಸತ್ತಿನಲ್ಲಿ ಆಪರೇಷನ್ ಸಿಂಧೂರ್ ಬಗ್ಗೆ ಮಾಡಿದ ಹೇಳಿಕೆಗಳ ಮೂಲಕ ಅವರು ತಮ್ಮ ಸ್ಥಾನಮಾನವನ್ನು ಕಡಿಮೆ ಮಾಡಿಕೊಂಡಿದ್ದಾರೆ ಮತ್ತು ಭಾರತದ ಉನ್ನತ ಖ್ಯಾತಿಗೆ ಹಾನಿ ಮಾಡಿದ್ದಾರೆ ಎಂದು ಭಾರತೀಯ ಜನತಾ ಪಕ್ಷದ ನಾಯಕ ಮತ್ತು ಕೇಂದ್ರ ಸಚಿವ ಕಿರಣ್ ರಿಜಿಜು ಆರೋಪಿಸಿದ್ದಾರೆ.

ಕಿರಣ್ ರಿಜಿಜು ಅವರು ಎಕ್ಸ್ ನಲ್ಲಿ ರಾಹುಲ್ ಗಾಂಧಿ ಅವರನ್ನು ಭಾರತೀಯ ಸಂಸತ್ತಿನ ಗೌರವವನ್ನು ಕಾಪಾಡಿಕೊಳ್ಳುವಂತೆ ವಿನಂತಿಸಿದ್ದಾರೆ.

# ದೇಶಭಕ್ತಿ ಗೀತಗಾಯನದಿಂದ ದೇಶಾಭಿಮಾನ

• ಪ್ರಜೋದಯ ವರದಿ

**ಆಲೂರು:** ಭಾರತ್ ಸ್ಕೌಟ್ಸ್ ಗೈಡ್ಸ್ ಹಮ್ಮಿಕೊಂಡಿರುವ ದೇಶಭಕ್ತಿ ಗೀತ ಗಾಯನ ಹಾಗೂ ಜಾನಪದ ಗೀತ ಗಾಯನ ಸ್ಪರ್ಧೆಗಳು ಮಕ್ಕಳಲ್ಲಿ ದೇಶಾಭಿಮಾನ ಬೆಳೆಸುವುದರ ಜೊತೆಗೆ ಸಂಗೀತಾಭಿರುಚಿಯನ್ನು ವೃದ್ಧಿಸುತ್ತದೆ ಎಂದು ಆಲೂರು ವಿಶ್ವೇಶ್ವರಯ್ಯ ಐಟಿಐ ಕಾಲೇಜಿನ ಪ್ರಾಂಶುಪಾಲ ಎಚ್.ವಿ.ನಾಗಭೂಷಣ್ ಅವರು ಅಭಿಪ್ರಾಯಪಟ್ಟರು.



ಆಲೂರಿನ ವಿಶ್ವೇಶ್ವರಯ್ಯ ಪಬ್ಲಿಕ್ ಶಾಲೆಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಂಸ್ಥೆ ಆಲೂರು ವತಿಯಿಂದ ತಾಲ್ಲೂಕು ಮಟ್ಟದ ದೇಶಭಕ್ತಿ ಗೀತಗಾಯನ ಸ್ಪರ್ಧೆಯಲ್ಲಿ ಮಕ್ಕಳನ್ನುದ್ದೇಶಿಸಿ ಮಾತನಾಡಿ, ಸ್ಕೌಟ್ಸ್ ಗೈಡ್ಸ್ ಸಂಸ್ಥೆಯು ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು, ಜೀವನ ಕೌಶಲಗಳನ್ನು ವೃದ್ಧಿಸುವ ನಿಟ್ಟಿನಲ್ಲಿ ನಿರಂತರವಾಗಿ ನೂರಾರು ಮೌಲಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ ಎಂದು ಹೇಳಿದರು.

ಸ್ಥಳೀಯ ಸಂಸ್ಥೆಯ ಉಪಾಧ್ಯಕ್ಷೆ ಸಿ.ಎಸ್.ಪೂರ್ಣಿಮಾ, ಜಿಲ್ಲಾ ಸ್ಕೌಟ್ಸ್ ಆಯುಕ್ತ ಸ್ಟೀಫನ್ ಪ್ರಕಾಶ್, ಜಿಲ್ಲಾ ಕಾರ್ಯದರ್ಶಿ ಸುರೇಶ್ ಗುರೂಜಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಬೊಮ್ಮೇಗೌಡ, ಜಿಲ್ಲಾ ಸಹಾಯಕ ಆಯುಕ್ತೆ ಪ್ರೇಮಾ ಪ್ರಕಾಶ್, ತಾಲ್ಲೂಕು ಸಹ ಕಾರ್ಯದರ್ಶಿ ಎಚ್.ಡಿ.ಕುಮಾರ್, ತಾಲ್ಲೂಕು ಜಂಟಿ ಕಾರ್ಯದರ್ಶಿ ಕೆ.ಎಲ್.ವೆಂಕಟರಗಯ್ಯ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ರೇಂಜರ್ ಲೀಡರ್ ಅನುಷಾ ಅವರು ತೀರ್ಪುಗಾರರಾಗಿ ಕಾರ್ಯ ನಿರ್ವಹಿಸಿದರು.

# ಸಣ್ಣಪುಟ್ಟಾಚಾರ್ ನಿಧನ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ನಿವಾಸಿ ನಿವೃತ್ತ ಶಿಕ್ಷಕ ಸಣ್ಣಪುಟ್ಟಾಚಾರ್ (97) ವಯೋಸಹಜ ಭಾನುವಾರ ಬೆಳಿಗ್ಗೆ ಮೃತಪಟ್ಟರು.



ಕಳೆದ 40 ವರ್ಷಗಳಿಂದ ನಿವೃತ್ತಿ ನಂತರ ಪೌರೋಹಿತ್ಯ ನಡೆಸಿಕೊಂಡಿದ್ದರು. ಪತ್ನಿ, 3 ಪುತ್ರಿಯರು ಹಾಗೂ ಇಬ್ಬರು ಪುತ್ರರಿದ್ದಾರೆ. ಮೂಲತಹ ತಾಲ್ಲೂಕಿನ ದೊಡ್ಡಕಾಡನೂರು ಗ್ರಾಮದವರು. ಕಳೆದ ಕೆಲವು ದಶಕಗಳಿಂದ ಪಟ್ಟಣದ ಅಕ್ಕಿಕುರುಬರ ಬೀದಿಯ ನಿವಾಸಿ ಕಿರಿಯ ಪುತ್ರ ರವಿ ಜತೆಗಿದ್ದರು. ಭಾನುವಾರ ಸಂಜೆ ವೇಳೆಗೆ ಪಟ್ಟಣದ ಪುರಸಭಾ ಚಿತಾಗಾರದಲ್ಲಿ ಅಂತ್ಯಕ್ರಿಯೆಯನ್ನು ನೆರವೇರಿಸಲಾಯಿತು.

# ಹಸಿರು ಮನೆಯ ಜಾಗೃತಿ ಮೂಡಿಸಿದ ಕೃಷಿ ವಿದ್ಯಾರ್ಥಿಗಳು



• ಪ್ರಜೋದಯ ವರದಿ

**ಹಾಸನ:** ಕಾರೆಕೆರೆ ಕೃಷಿ ಮಹಾವಿದ್ಯಾಲಯ ಬಿಎಸ್‌ಸಿ ಅಂತಿಮ ವರ್ಷದ ವಿದ್ಯಾರ್ಥಿಗಳು ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ತಾಲ್ಲೂಕಿನ ಸಣ್ಣ ಚಾಕನಹಳ್ಳಿ ಹಾಗೂ ದೊಡ್ಡ ಚಾಕನಹಳ್ಳಿಯಲ್ಲಿಯಲ್ಲಿ ಹಸಿರು ಮನೆ ಜಾಗೃತಿ ಮೂಡಿಸಿದರು.

ಸಂಪನ್ಮೂಲ ವ್ಯಕ್ತಿ ಡಾ. ಶಿವಬಸಪ್ಪ ಕಂದಕೂರ್ ಅವರು ಮಾತನಾಡಿ, ಹಸಿರು ಮನೆಯು ಸಸ್ಯಗಳನ್ನು ನಿಯಂತ್ರಿತ ವಾತಾವರಣದಲ್ಲಿ ಬೆಳೆಸಲು ನೆರವಾಗುತ್ತದೆ. ತೇವಾಂಶ, ಬೆಳಕು, ಗಾಳಿಯ ಅರಿವು ಮುಂತಾದವುಗಳನ್ನು ನಿಯಂತ್ರಿಸಬಹುದು. ಹವಾಮಾನ ಬದಲಾವಣೆಯಿಂದ ಸಸಿಗಳ ರಕ್ಷಣೆ, ಮಳೆ-ಗಾಳಿ ಮುಂತಾದ ಪ್ರಾಕೃತಿಕ ಹಾನಿಯಿಂದ ರಕ್ಷಣೆ, ವರ್ಷಪೂರ್ತಿ ಬೆಳೆ ಬೆಳೆಯುವ ಅವಕಾಶ ಮತ್ತು ಗುಣಮಟ್ಟದ ಉತ್ಪಾದನೆ ಹಸಿರು ಮನೆಯಿಂದ ಸಾಧ್ಯವಾಗಲಿದೆ ಎಂದರು.

ಹಸಿರು ಮನೆಯಲ್ಲಿ ಟೊಮ್ಯಾಟೊ, ಕ್ಯಾಪ್ಸಿಕಂ, ಸೌತೆಕಾಯಿ, ಗುಲಾಬಿ ಮತ್ತಿತರ ಗೃಹೋಪಯೋಗಿ ಪದಾರ್ಥಗಳ ಬೆಳೆಯಬಹುದು ಎಂದರು.

# ಸಾಮರಸ್ಯದ ಸಂಘಟನೆಗೆ ಮೌಲ್ಯ ಹೆಚ್ಚು

• ಪ್ರಜೋದಯ ವರದಿ

**ಅರಸೀಕೆರೆ:** ಹೆಸರಿಗಾಗಿ ಸಂಘಟನೆ ಸ್ಥಾಪಿಸುವುದಕ್ಕಿಂತ ಸಾಮರಸ್ಯದಿಂದ ಒಟ್ಟಾಗಿ ಜೊತೆ ಸಾಗಲು ಸಂಘಟನೆ ಮಾಡಿಕೊಂಡರೆ ಅಂತಹ ಸಂಘ ಹಾಗೂ ಸಂಸ್ಥೆಯ ಮೌಲ್ಯ ಹೆಚ್ಚು ಎಂದು ನಗರಸಭೆ ಅಧ್ಯಕ್ಷ ಎಂ.ಸಮಿವುಲ್ಲಾ ಅವರು ಹೇಳಿದರು.



ನಗರದ ಜೇನುಕಲ್ ಕ್ರೀಡಾಂಗಣದಲ್ಲಿ ತಾಲ್ಲೂಕು ಛಾಯಾಗ್ರಾಹಕರ ಸಂಘದ ವತಿಯಿಂದ ಆಯೋಜಿಸಿದ್ದ ಫೋಟೋಗ್ರಾಫರ್ಸ್‌ಗಳ ಕ್ರಿಕೆಟ್ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, 300ಕ್ಕೂ ಹೆಚ್ಚು ಸದಸ್ಯರನ್ನು ಒಳಗೊಂಡ ಫೋಟೋಗ್ರಾಫರ್ಸ್ ಸಂಘವು ಇಂದು ಕ್ರಿಕೆಟ್ ಪಂದ್ಯ ಆಯೋಜಿಸಿರುವುದಲ್ಲದೆ ತಾವೆಲ್ಲ ಪಾಲ್ಗೊಂಡು ಆಟ ಆಡುತ್ತಿರುವುದು ಸಂತಸದ ವಿಷಯವೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ತಮ್ಮ ಸಂಘಟನೆ ಸಕ್ರಿಯವಾಗಿ ಕಾರ್ಯ ನಿರ್ವಹಿಸಲು ಒಂದು ಕಚೇರಿಯ ಅವಶ್ಯಕತೆ ಇದೆ. ತಾವು ನಿವೇಶನ ಕೋರಿ ನಗರಸಭೆಗೆ ಅರ್ಜಿ ಸಲ್ಲಿಸಿದರೆ ಸರ್ಕಾರದ ನಿಯಮಾನುಸಾರ ಸೂಕ್ತ ನಿವೇಶನ ಕೊಡಿಸಲು ನಗರಸಭೆ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ತಾಲ್ಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಜಗದೀಶ್ ಅವರು ಮಾತನಾಡಿ, ಹಿರಿಯ ಛಾಯಾಗ್ರಾಹಕರ ಮಾರ್ಗದರ್ಶನ ಯುವ ಫೋಟೋಗ್ರಾಫರ್‌ಗಳ ಸಹಕಾರದೊಂದಿಗೆ ತಾಲ್ಲೂಕಿನಲ್ಲಿ ಛಾಯಾಗ್ರಾಹಕರ ಸಂಘ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ ಮುಂದೆ ನಾವು ಇದೇ ರೀತಿ ಜೊತೆಯಾಗಿ ಸಾಗಿದರೆ ಸರ್ಕಾರದಿಂದ ನಮಗೆ ದೊರೆಯುವ ಎಲ್ಲಾ ಸವಲತ್ತುಗಳನ್ನು ಪಡೆದುಕೊಳ್ಳಲು ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಪರಸ್ಪರ ವಿಶ್ವಾಸದಿಂದ ಜೊತೆ ಸಾಗೋಣ ಎಂದು ಕರೆ ನೀಡಿದರು.

ನಗರಸಭೆ ಉಪಾಧ್ಯಕ್ಷ ಮನೋಹರ್ ಮೇಸ್ತ್ರಿ, ಕಾಂಗ್ರೆಸ್ ಮುಖಂಡ ಹರೀಶ್ ಮಾತನಾಡಿದರೆ, ವೇದಿಕೆಯಲ್ಲಿ ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಮಂಜುನಾಥ್, ಹಿರಿಯ ಛಾಯಾಗ್ರಹಕ ಅರುಣ್ ಕುಮಾರ್, ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಗ್ರಂಥಾಲಯ ಎಂಬುದು ಜ್ಞಾನದ ಭಂಡಾರ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಅಪಾರ ಜ್ಞಾನ ಸಂಪಾದನೆ ಸಲುವಾಗಿ ಪುಸ್ತಕ ಓದುವ ಅಭ್ಯಾಸವನ್ನು ಬೆಳೆಸಿಕೊಳ್ಳಬೇಕೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.



ತಾಲ್ಲೂಕಿನ ಮರುವನಹಳ್ಳಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ನೂತನವಾಗಿ ಪ್ರಾರಂಭಿಸಿರುವ ಸಾರ್ವಜನಿಕರ ಗ್ರಂಥಾಲಯಕ್ಕೆ ಶನಿವಾರ ಚಾಲನೆ ನೀಡಿ ಮಾತನಾಡಿ, ಗ್ರಂಥಾಲಯ ಅಪಾರ ಜ್ಞಾನ ಸಂಪತ್ತು ತುಂಬಿರುವ ಭಂಡಾರ. ಟಿವಿ ವೀಕ್ಷಣೆ ಹಾಗೂ ಮೊಬೈಲ್ ಬಳಕೆ ಮಿತವಾಗಿರಲಿ. ಆದರೆ ಪುಸ್ತಕ ಓದುವ ಹವ್ಯಾಸವನ್ನು ಮಾತ್ರ ಜೀವನದ ಒಂದು ಭಾಗವಾಗಿ ರೂಢಿಸಿಕೊಳ್ಳಬೇಕು. ಅದರಿಂದ ಜ್ಞಾನಾರ್ಜನೆ ಜೊತೆಗೆ ಸಮಾಜದ ಬದಲಾವಣೆಗೆ ದಾರಿದೀಪವಾಗಲಿದೆ ಎಂದು ತಿಳಿಸಿದರು.

ಗ್ರಂಥಾಲಯವು ವಿದ್ಯಾರ್ಥಿಗಳಿಗೆ ಮಾತ್ರವಲ್ಲದೆ ದಿನವಿಡೀ ದುಡಿದು ದಣಿವಾರಿ ಬರುವ ರೈತರು ಸಹ ಸದುಪಯೋಗ ಪಡಿಸಿಕೊಳ್ಳಬೇಕು.

ಒಂದಷ್ಟು ಸಮಯವನ್ನು ಗ್ರಂಥಾಲಯದಲ್ಲಿ ಕುಳಿತು ಕೃಷಿ ಹಾಗೂ ಇತರೆ ವಿಚಾರಗಳ ಬಗ್ಗೆ ಪುಸ್ತಕ ಓದಿ ತಿಳಿದುಕೊಳ್ಳಬಹುದೆಂದು ಅವರು ಸಲಹೆ ನೀಡಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ವಳಗೇರಹಳ್ಳಿ ಮಂಜೇಗೌಡ, ಗ್ರಾಮ ಪಂಚಾಯಿತಿ ಸದಸ್ಯ ಬಾಲರಾಜ್, ನುಗ್ಗೇಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಸಂಪತ್ ಕುಮಾರ್, ಪಿಡಿಒ ಶೋಭಾ, ಗ್ರಂಥಪಾಲಕಿ ಕವನ, ಗ್ರಾಮಸ್ಥರಾದ ಕೃಷ್ಣೇಗೌಡ, ಬೋರೇಗೌಡ ಸೇರಿದಂತೆ ಇನ್ನಿತರರು ಇದ್ದರು.

# ಆದ್ಯತೆಗೆ ಅನುಗುಣವಾಗಿ ಅಭಿವೃದ್ಧಿ ಕಾರ್ಯ

• ಪ್ರಜೋದಯ ವರದಿ

**ಸಕಲೇಶಪುರ:** ಗ್ರಾಮಾಂತರ ಪ್ರದೇಶಗಳ ರಸ್ತೆಗಳ ಅಭಿವೃದ್ಧಿಗೆ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುವುದೆಂದು ಶಾಸಕ ಸಿಮೆಂಟ್ ಮಂಜು ಅವರು ತಿಳಿಸಿದರು.



ತಾಲ್ಲೂಕಿನ ಕುನಿಗನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಡಿಜಿಟಲ್ ಗ್ರಂಥಾಲಯ ಕಟ್ಟಡ, ಆದರವಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೌಚಾಲಯ, ಕುನಿಗನಹಳ್ಳಿ ಅಂಬೇಡ್ಕರ್ ಸಮುದಾಯ ಭವನದ ಬಳಿ ಹೈಟೆಕ್ ಶೌಚಾಲಯ ಕಾಮಗಾರಿ ಉದ್ಘಾಟಿಸಿ ಮಾತನಾಡಿ, ಸರ್ಕಾರದ ಹಣ ಬಹುತೇಕವಾಗಿ ಭಾಗ್ಯಗಳಿಗೆ ವಿನಿಯೋಗವಾಗುತ್ತಿದೆ. ಅದರಿಂದಾಗಿ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚು ಅನುದಾನ ಬರುತ್ತಿಲ್ಲ. ಆದ್ದರಿಂದ ಆದ್ಯತೆ ಆಧಾರದ ಮೇಲೆ ವಿವಿಧ ಕಾಮಗಾರಿಗಳಿಗೆ ಅನುದಾನ ನೀಡಲಾಗುತ್ತಿದೆ. ನಾನು ಪ್ರತಿನಿಧಿಸುವ ಕ್ಷೇತ್ರವು ಮೂರು ತಾಲ್ಲೂಕು ಒಳಗೊಂಡಿದೆ ಎಂದು ಅವರು ತಿಳಿಸಿದರು.ರು.

ಕ್ಷೇತ್ರದ ಪ್ರತಿಯೊಂದು ಗ್ರಾಮದಲ್ಲೂ ರಸ್ತೆ ಹಾಗು ಕುಡಿಯುವ ನೀರಿನ ಸೌಲಭ್ಯ ಸೇರಿ ಹಲವು ಅಭಿವೃದ್ಧಿ ಕೆಲಸಗಳು ಬಾಕಿ ಇವೆ. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಎಲ್ಲಾ ಕೆಲಸಗಳನ್ನು ಮುಗಿಸಲು ಪ್ರಯತ್ನ ಮಾಡುತ್ತೇನೆಂದು ಹೇಳಿದರು.

ಬಾಳ್ಳುಪೇಟೆಯಿಂದ ಹೊಸಕೋಟೆ ವರೆಗಿನ ರಸ್ತೆ ಕಾಮಗಾರಿಯನ್ನು ಮಳೆಗಾಲ ಮುಗಿದ ನಂತರ ಆರಂಭಿಸಲಾಗುವುದು. ಮುಂದಿನ ದಿನಗಳಲ್ಲಿ ಈ ಭಾಗದ ಇತರ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಕುನಿಗನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಪ್ರಕಾಶ್ ಮತ್ತಿತರರು ಹಾಜರಿದ್ದರು.

# ಶರಣ ನುಲಿಯ ಚಂದಯ್ಯ ಜಯಂತಿ

• ಪ್ರಜೋದಯ ವರದಿ

**ಸಕಲೇಶಪುರ:** ಶರಣ ನುಲಿಯ ಚಂದಯ್ಯನವರು ಕಾಯಕದಿಂದ ಬಂದ ಹಣದಿಂದ ಜಂಗಮ ದಾಸೋಹ ನಡೆಸುತ್ತಿದ್ದ ಕಾಯಕ ಜೀವಿ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.



ಪಟ್ಟಣದ ಮಿನಿವಿಧಾನ ಸೌಧದಲ್ಲಿ ಶನಿವಾರ ಹಮ್ಮಿಕೊಂಡಿದ್ದ ನುಲಿಯ ಚಂದಯ್ಯ ಜಯಂತಿ ಉದ್ಘಾಟಿಸಿ ಮಾತನಾಡಿ, 12ನೇ ಶತಮಾನದಲ್ಲಿ ಬಸವಣ್ಣನವರ ಸಮಕಾಲಿನ ಬಸವಾದಿ ಶರಣರಲ್ಲಿ ಒಬ್ಬರಾದ ವಚನ ಕಾರ ನುಲಿಯ ಚಂದಯ್ಯ ಕಲ್ಯಾಣದ ಹೊರವಲಯ ದಲ್ಲಿರುವ ಕೆರೆ ನೀರಿನ ದಂಡೆ ಯಲ್ಲಿ ಬೆಳೆದ ಸೊಗಸಾದ ಹುಲ್ಲು ತಂದು ಹಗ್ಗ ಹೊಸೆದು ಮಾರಾಟ ಮಾಡಿ ಅದರಲ್ಲಿ ಬಂದ ಹಣದಿಂದ ಜಂಗಮ ದಾಸೋಹ ನಡೆಸುತ್ತಿದ್ದರು. ತಮ್ಮ ವಚನ ಸಾಹಿತ್ಯದ ಮೂಲಕ ಸಮಾಜದಲ್ಲಿರುವ ಮೌಢ್ಯತೆ ಮತ್ತು ಅಂಧಕಾರ ತಿದ್ದುವ ಕಾರ್ಯ ಮಾಡಿದರೆಂದರು.

ಕುಳುವ ಸಮಾಜ ಶೈಕ್ಷಣಿಕ, ರಾಜ ಕೀಯ, ಆರ್ಥಿಕವಾಗಿ ಹಿಂದುಳಿದಿದೆ. ಸರ್ಕಾರದ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಎಲ್ಲಾ ರಂಗದಲ್ಲೂ ಮುನ್ನಡೆಯಬೇಕೆಂದರು.

ಕುಳುವ ಸಮಾಜದ ಹಿರಿಯರಿಗೆ ಸನ್ಮಾನಿಸಲಾಯಿತು. ಕುಳುವ ಸಮಾ ಜದ ತಾಲ್ಲೂಕು ಅಧ್ಯಕ್ಷ ಮೋಹನ್ ಕುಮಾರ್, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

# ಆಕ್ಷೇಪಣೆ ಆಹ್ವಾನ

**ಹಾಸನ:** ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ 20 ಅಂಗನವಾಡಿ ಕಾರ್ಯಕರ್ತೆ ಮತ್ತು 93 ಸಹಾಯಕಿಯರ ಹುದ್ದೆಖಾಲಿ ಇದ್ದು ಇವುಗಳ ಆಯ್ಕೆ ಸಂಬಂಧ 11-03-2025 ರಿಂದ 09-04-2025 ರವರೆಗೂ ಕೊನೆ ದಿನಾಂಕ ನಿಗಧಿಪಡಿಸಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿರುತ್ತದೆ.

ಸ್ವೀಕೃತಗೊಂಡ ಅರ್ಜಿಗಳನ್ನು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸಮಿತಿಯಲ್ಲಿ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಾತ್ಕಾಲಿಕ ಪಟ್ಟಿಯನ್ನು ಶಿಶು ಅಭಿವೃದ್ಧಿ ಯೋಜನೆ ಹಾಸನ ಕಚೇರಿಯಲ್ಲಿ ಪ್ರಕಟಿಸಲಾಗಿರುತ್ತದೆ. ಸಾರ್ವಜನಿಕರು ಆಕ್ಷೇಪಣೆಗಳಿದ್ದಲ್ಲಿ ಆ.6 ರಿಂದ ಆ.14 ಸಮಯ ಸಂಜೆ 5.30 ರ ಒಳಗೆ ಶಿಶು ಅಭಿವೃದ್ಧಿ ಯೋಜನೆ ಹಾಸನ ಈ ಕಚೇರಿಗೆ ಆಕ್ಷೇಪಣೆ ಕುರಿತು ಪೂರಕ ದಾಖಲಾತಿಗಳೊಂದಿಗೆ ನೇರವಾಗಿ ಸಲ್ಲಿಸಬಹುದಾಗಿರುತ್ತದೆ. ಸದರಿ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

## ಭಾರತೀಯರೆಲ್ಲರೂ ಭಿನ್ನತೆ ಮರೆತು ಒಂದಾಗಿಸುವಲ್ಲಿ ಸಫಲ: ಜಯಾರಮೇಶ್

# ರಾಷ್ಟ್ರಗೀತೆಗಳಿಂದ ಜನರಲ್ಲಿ ಏಕತಾ ಭಾವ

• ಪ್ರಜೋದಯ ವರದಿ

**ಹಾಸನ:** ರಾಷ್ಟ್ರಗೀತೆಗಳು ನಮ್ಮಲ್ಲಿ ದೇಶಾಭಿಮಾನ ಹುಟ್ಟಿಸುವುದು ಮಾತ್ರವಲ್ಲದೆ ಏಕತೆ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆಂದು ಗೈಡ್ಸ್ ಆಯುಕ್ತೆ ಜಯಾ ರಮೇಶ್ ಅವರು ಹೇಳಿದರು.



ನಗರದ ಜಿಲ್ಲಾ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್‌ನಿಂದ ಶನಿವಾರ ಏರ್ಪಡಿಸಿದ್ದ ದೇಶಭಕ್ತಿ ಗೀತ ಗಾಯನ ಸ್ಪರ್ಧೆಗೆ ಬಂದಿದ್ದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಭಾರತದ ವೈವಿಧ್ಯತೆಯನ್ನು ಸಾರುವ ಹಲವಾರು ಗೀತೆಗಳು ಭಾರತೀಯರೆಲ್ಲರೂ ತಮ್ಮಲ್ಲಿನ ಭಿನ್ನತೆಯನ್ನು ಮರೆತು ಒಂದಾಗಿಸುವಲ್ಲಿ ಸಫಲವಾಗಿವೆ ಎಂದರು.

ಸ್ಕೌಟ್ಸ್ ಅಂಡ್ ಗೈಡ್ಸ್ ಸ್ಥಳೀಯ ಸಂಸ್ಥೆ ಕಾರ್ಯದರ್ಶಿ ಬಿ.ಎಸ್. ವನಜಾಕ್ಷಿ ಅವರು ಮಾತನಾಡಿ, ಆಗಸ್ಟ್ ತಿಂಗಳು ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸುವ ಸುಸಂದರ್ಭ. ಭಾರತ ಸ್ವಾತಂತ್ರ್ಯ ಹೋರಾಟದಲ್ಲಿ ದೇಶಭಕ್ತಿ ಗೀತೆಗಳು ನೀಡಿದ ಕೊಡುಗೆ ಸಾಕಷ್ಟಿದೆ. ಅಂತಹ ದೇಶಭಕ್ತಿ ಗೀತೆಗಳನ್ನು ಸ್ಮರಿಸುತ್ತಾ ಆ ಗೀತ ರಚನಾಕಾರರಿಗೂ ಕೃತಜ್ಞತೆ ಸಲ್ಲಿಸುವ ದೃಷ್ಟಿಯಿಂದ ಪ್ರತಿವರ್ಷ ಸ್ಕೌಟ್ಸ್ ಅಂಡ್ ಗೈಡ್ಸ್‌ನಿಂದ ಗೀತ ಗಾಯನ ಸ್ಪರ್ಧೆ ಆಯೋಜಿಸುತ್ತಿದ್ದೇವೆ ಎಂದರು.

ಸುಮಾರು 20ಕ್ಕೂ ಹೆಚ್ಚು ಶಾಲೆಗಳಿಂದ ಭಾಗವಹಿಸಿದ್ದ 120 ವಿದ್ಯಾರ್ಥಿಗಳು ಗಾಯನ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ರೋವರ್ ಲೀಡರ್ ಗಿರೀಶ್, ಗ್ಯಾರಳ್ಳಿ ತಮ್ಮಯ್ಯ, ಅರ್ಷಿಯ ತಬಸ್ಸುಮ್, ನಿಕಟಪೂರ್ವ ಜಿಲ್ಲಾ ಸಹಕಾರ್ಯದರ್ಶಿ ಹೆಚ್.ಜಿ. ಕಾಂಚನಮಾಲ, ಸಂತ ಫಿಲೋಮಿನಾ ಶಾಲೆಯ ಗೈಡ್ ಕ್ಯಾಪ್ಟನ್ ಧನಲಕ್ಷ್ಮಿ, ಗೈಡ್ ಕ್ಯಾಪ್ಟನ್ ಭಾಗ್ಯ, ಫ್ಲಾಕ್ ಲೀಡರ್ ಜೋವಿಟಾ, ರೇಂಜರ್ ಲೀಡರ್‌ಗಳಾದ ಅಶ್ವಿನಿ, ಸುನೀತಾ, ನೂತನ್, ದೇವರಾಜು ಮತ್ತಿತರರು ಉಪಸ್ಥಿತರಿದ್ದರು.

# ಕಡಿಮೆ ಬೆಲೆಗೆ ಗುಣಮಟ್ಟದ ಆಹಾರ ದೊರೆಯಲಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ ಬಳಿಯ ನುಗ್ಗೇಹಳ್ಳಿ ಮುಖ್ಯ ರಸ್ತೆ ಬಂಡಿಹಳ್ಳಿ ಗೇಟ್ ಬಳಿ ಅಭಿಷೇಕ್, ಸ್ವಾಮಿಗೌಡ, ಮತ್ತು ಮಂಜೇಗೌಡ ಅವರ ಒಡೆತನದಲ್ಲಿ ನೂತನ ಟ್ರಾವೆಲ್ಲರ್ಸ್ ಎಸ್ಕೇಪ್ ನೂತನ ಹೋಟೆಲ್ ಉದ್ಯಮವನ್ನು ವರಮಹಾಲಕ್ಷ್ಮಿ ಹಬ್ಬದಂದು ಪ್ರಾರಂಭಿಸಲಾಗಿದ್ದು, ಪ್ರವಾಸಿಗರನ್ನು ದೃಷ್ಟಿಯಾಗಿಟ್ಟುಕೊಂಡು ಆರಂಭಿಸಲಾಗಿರುವ ಉದ್ಯಮಕ್ಕೆ ಶುಭವಾಗಲಿ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಆರೈಸಿದರು.



ಜಿಲ್ಲೆಯಲ್ಲಿ ಪ್ರಥಮ ಬಾರಿಗೆ ರಾಷ್ಟ್ರೀಯ ಹೆದ್ದಾರಿ ಬಳಿ ರೆಸಾರ್ಟ್ ರೂಪದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ನೂತನ ಟ್ರಾವೆಲ್ಲರ್ಸ್ ಎಸ್ಕೇಪ್ ಎಂಬ ನೂತನ ಹೋಟೆಲ್ ಉದ್ಯಮವನ್ನು ಪ್ರಾರಂಭ ಮಾಡಲಾಗಿದೆ. ಇದರಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಹಾಗೂ ತಾಲ್ಲೂಕಿನ ಜನರಿಗೆ ಕಡಿಮೆ ಬೆಲೆಯಲ್ಲಿ ಗುಣಮಟ್ಟದ ಆಹಾರ ಸಿಗಲಿದೆ. ರೆಸಾರ್ಟ್‌ನ್ನು ಬಹಳ ವಿಭಿನ್ನವಾಗಿ ಹಾಗೂ ಆಕರ್ಷಣೆಯಾಗಿ ನಿರ್ಮಾಣ ಮಾಡಲಾಗಿದ್ದು, ಇದು ಬರುವ ಪ್ರಯಾಣಿಕರನ್ನು ಹೆಚ್ಚು ಆಕರ್ಷಿಸುತ್ತದೆ, ನೂತನ ಉದ್ಯಮವನ್ನು ಪ್ರಾರಂಭ ಮಾಡಿರುವ ಅಭಿಷೇಕ್, ಸ್ವಾಮಿಗೌಡ, ಮಂಜೇಗೌಡ, ಅವರಿಗೆ ಒಳ್ಳೆಯದಾಗಲಿ ಇವರು ಆರಂಭಿಸಿರುವ ಉದ್ಯಮ ಯಶಸ್ಸು ಕಂಡು ಬೇರೆ ಕಡೆಗಳಲ್ಲೂ ಇದೇ ರೀತಿ ನಿರ್ಮಾಣ ಮಾಡುವಂತಾಗಲಿ ಎಂದು ಆಶಿಸಿದರು.

ನೂತನ ಉದ್ಯಮಕ್ಕೆ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯೆ ಕುಸುಮ ಬಾಲಕೃಷ್ಣ, ರಾಜ್ಯ ಜೆಡಿಎಸ್‌ನ ಉಪಾಧ್ಯಕ್ಷ ಹಿರೀಸಾವೆ ರಾಮಣ್ಣ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಅಂಬಿಕಾ ರಾಮಣ್ಣ, ಪುರಸಭಾ ಅಧ್ಯಕ್ಷ ಸಿ.ಎನ್.ಮೋಹನ್, ಟಿಎಪಿಸಿಎಂಎಸ್ ಅಧ್ಯಕ್ಷ ಅನಿಲ್‌ಮರಗೂರು, ಮಾಜಿ ಪುರಸಭಾ ಅಧ್ಯಕ್ಷ ಶಶಿಧರ್, ಹೇಮಾವತಿ, ಸಕ್ಕರೆ ಕಾರ್ಖಾನೆ ಅಧ್ಯಕ್ಷ ವೆಂಕಟೇಶ್, ತಾಲೂಕು ಜೆಡಿಎಸ್ ಯುವ ಮುಖಂಡ ಜೈದೀಪ್ ಗೌಡ, ಕಾಂಗ್ರೆಸ್ ಯುವ ಮುಖಂಡ ಶಶಾಂಕ್ ಗೋಪಾಲಸ್ವಾಮಿ, ನಾಗರಿಕ ವೇದಿಕೆ ಅಧ್ಯಕ್ಷ ತೋಟಿ ನಾಗರಾಜ್, ನಗರ ಠಾಣೆ ಪಿಎಸ್‌ಐ ಅನಿಲ್, ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕದ ಅಧ್ಯಕ್ಷ ಹಡೇನಹಳ್ಳಿ ಲೋಕೇಶ್, ಸೇರಿದಂತೆ ಎಲ್ಲ ಪಕ್ಷಗಳ ಪ್ರಮುಖ ನಾಯಕರು ಮತ್ತು ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

# ನೋಟೀಸ್ ನೀಡದೆ ಮತದಾರರ ಹೆಸರು ಅಳಿಸಿಲ್ಲ

## ಸುಪ್ರೀಂ ಕೋರ್ಟ್‌ಗೆ ಚುನಾವಣೆ ಆಯೋಗ ಸ್ಪಷ್ಟನೆ | ಮೇಲ್ಮನವಿಗೆ ಅವಕಾಶವಿದೆ

• ಪ್ರಜೋದಯ ವರದಿ



**ನವದೆಹಲಿ:** ನೀತಿ ಹಾಗು ಸಾಮಾನ್ಯ ನ್ಯಾಯ ತತ್ವವನ್ನು ಕಟ್ಟುನಿಟ್ಟಾಗಿ ಪಾಲಿಸುವ ನಿಟ್ಟಿನಲ್ಲಿ ಬಿಹಾರದಲ್ಲಿ ನಡೆಸಲಾದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ ಪ್ರಕಟಿಸಿರುವ ಮತದಾರರ ಕರಡು ಪಟ್ಟಿಯಿಂದ ಯಾವ ಮತದಾರರ ಹೆಸರನ್ನು ಅಳಿಸಿಲ್ಲವೆಂದು ಚುನಾವಣಾ ಆಯೋಗವು ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.

ಸಂಬಂಧಪಟ್ಟವರಿಗೆ ಸೂಚನೆ ನೀಡದೆ ಹೆಸರುಗಳನ್ನು ಕೈಬಿಡುವ ಕ್ರಮ ಕೈಗೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿರುವ ಆಯೋಗ, ಅಂತಹ ಮತದಾರರಿಗೆ ತಮ್ಮ ಅಹವಾಲು ಸಲ್ಲಿಸಲು ಮತ್ತು ಸಂಬಂಧಿತ ದಾಖಲೆಗಳನ್ನು ಒದಗಿಸಲು ಸೂಕ್ತ ಅವಕಾಶ ಒದಗಿಸಲಾಗುವುದು ಎಂದೂ ಹೇಳಿದೆ.

ಬಿಹಾರದಲ್ಲಿ ಸುಮಾರು 65 ಲಕ್ಷ ಜನರ ಹೆಸರನ್ನು ಸಕಾರಣ ನೀಡದೆ ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಆರೋಪಿಸಿ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ ಎನ್‌ಜಿಒ ಸುಪ್ರೀಂ ಕೋರ್ಟ್‌ಗೆ ಆ.6ರಂದು ಅರ್ಜಿ ಸಲ್ಲಿಸಿತ್ತು. ಈ ಸಂಬಂಧದ ನೋಟೀಸ್‌ಗೆ ಚುನಾವಣಾ ಆಯೋಗ ಪ್ರತಿಕ್ರಿಯೆ ನೀಡಿದೆ.

ಮತದಾರರ ಪಟ್ಟಿಯಿಂದ ಹೆಸರನ್ನು ತೆಗೆದು ಹಾಕುವುದರ ವಿರುದ್ಧ ಸಂಬಂಧಿತ ನಿಯಮಗಳ ಅಡಿಯಲ್ಲಿ ಎರಡು ಹಂತದ ಮೇಲ್ಮನವಿಗೆ ಅವಕಾಶ ಕಲ್ಪಿಸಲಾಗಿದೆ. ಆ ಮೂಲಕ ಸುರಕ್ಷತಾ ಕ್ರಮಗಳನ್ನು ಬಲಪಡಿಸಲಾಗಿದೆ ಎಂದು ಪ್ರತಿಕ್ರಿಯಿಸಿದೆ. ಸಾರ್ವಜನಿಕರು ಅಥವಾ ರಾಜಕೀಯ ಪಕ್ಷಗಳಿಂದ ಬರುವ ಆಕ್ಷೇಪಣೆಗಳ ಕುರಿತು ಸಾರ್ವಜನಿಕರಿಗೆ ತಿಳಿಸುವ ಸಲುವಾಗಿ ಆಯೋಗವು ನಿತ್ಯವೂ ಪತ್ರಿಕಾ ಪ್ರಕಟಣೆಗಳನ್ನು ಬಿಡುಗಡೆ ಮಾಡುತ್ತಿದೆ. ಹೆಸರುಗಳನ್ನು ಅಳಿಸುವ ಸಂಬಂಧ ನೀಡಿದ ನೋಟೀಸ್ ಅವಧಿ ಮುಕ್ತಾಯದ ಬಳಿಕ ಸಕ್ಷಮ ಪ್ರಾಧಿಕಾರವು ಕ್ರಮ ಕೈಗೊಳ್ಳಲಿದೆ ಎಂದು ಉಲ್ಲೇಖಿಸಿದೆ.

ಬಿಹಾರದಲ್ಲಿನ ಮೊದಲ ಹಂತ ಪೂರ್ಣಗೊಂಡಿದೆ. ಪಟ್ಟಿಯಲ್ಲಿರುವ ಮತದಾರರಿಗೆ ಸಂಬಂಧಿಸಿದ ಮಾಹಿತಿಯನ್ನು ಸಂಗ್ರಹಿಸುವ ಸಲುವಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಪ್ರತಿ ಮನೆಗಳಿಗೆ ಭೇಟಿ ನೀಡಿದ್ದರು. ಅದರಂತೆ, ಕರಡು ಪಟ್ಟಿಯನ್ನು ಇದೇ ಆ. 1ರಂದು ಪ್ರಕಟಿಸಲಾಗಿದೆ ಎಂದಿದೆ. ಪ್ರತಿಯೊಬ್ಬ ಅರ್ಹ ಮತದಾರರನ್ನೂ ಪಟ್ಟಿಗೆ ಸೇರಿಸುವ ಉದ್ದೇಶದಿಂದ ಆಯೋಗವು ಪಟ್ಟಿಯಲ್ಲಿಲ್ಲದ ಅರ್ಹರು ತಮ್ಮ ಗಣತಿ ನಮೂನೆಗಳನ್ನು 2025ರ ಜು.27ರೊಳಗೆ ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟ್‌ಗಳೊಂದಿಗೆ ಹಂಚಿಕೊಳ್ಳುವಂತೆ ಮಾಡಿತ್ತು. ಅದರಿಂದಾಗಿ ಪರಿಶೀಲನೆ ಸಂದರ್ಭದಲ್ಲಿ ದೋಷಗಳನ್ನು ಸರಿಪಡಿಸಲು ಸಾಧ್ಯ ಮತ್ತು ಕರಡುಪಟ್ಟಿಗೆ ಹೆಸರುಗಳನ್ನು ಸೇರಿಸಬಹುದು. ನವೀಕರಿಸಲಾದ ಪಟ್ಟಿಯನ್ನು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಮತ್ತೊಮ್ಮೆ ಹಂಚಿಕೊಳ್ಳಲಾಗುವುದೆಂದು ತಿಳಿಸಿದೆ.

ರಾಜ್ಯದ ವಿವಿಧ ಇಲಾಖೆಗಳಿಂದ ಅಗತ್ಯ ದಾಖಲೆಗಳನ್ನು ಸಂಗ್ರಹಿಸುವುದೂ ಸೇರಿ ಮತದಾರರಿಗೆ ನೆರವಾಗುವ ಸಲುವಾಗಿ ಚುನಾವಣಾ ಆಯೋಗವು ಪ್ರಕ್ರಿಯೆಗಾಗಿ ಸುಮಾರು 2.5 ಲಕ್ಷ ಸಿಬ್ಬಂದಿ/ಸ್ವಯಂ ಸೇವಕರನ್ನು ನಿಯೋಜಿಸಿತ್ತು. ಅವರಲ್ಲಿ ಹೆಚ್ಚಿನವರು ಬಿಹಾರದ ಸರ್ಕಾರಿ ಅಧಿಕಾರಿಗಳು ಎಂದು ಅಫಿಡವಿಟ್‌ನಲ್ಲಿ ಉಲ್ಲೇಖಿಸಲಾಗಿದೆ.

ಕರಡು ಪಟ್ಟಿಯನ್ನು ಆ.1ರಿಂದ ಸೆ.1ರವರೆಗೆ ಸಂಪೂರ್ಣ ಪರಿಶೀಲನೆ ನಡೆಸಲು ಅನುಕೂಲವಾಗುವಂತೆ ರಾಜಕೀಯ ಪಕ್ಷಗಳಿಗೆ ಮುದ್ರಿತ ಮತ್ತು ಡಿಜಿಟಲ್ ಪ್ರತಿಗಳನ್ನು ನೀಡಲಾಗಿದೆ. ಸಾರ್ವಜನಿಕರಿಗೂ ಆನ್‌ಲೈನ್ ಮೂಲಕ ಪಟ್ಟಿ ಸಿಗುವಂತೆ ಮಾಡಲಾಗಿದೆ. ಹಾಗೆಯೇ, ಬಿಹಾರದಿಂದ ತಾತ್ಕಾಲಿಕವಾಗಿ ವಲಸೆ ಹೋಗಿರುವ ಯಾವುದೇ ಮತದಾರನ ಹೆಸರೂ ಪಟ್ಟಿಯಿಂದ ಬಿಟ್ಟುಹೋಗದಂತೆ ಖಚಿತಪಡಿಸಿಕೊಳ್ಳಲು ಸುಮಾರು 246 ಪತ್ರಿಕೆಗಳಲ್ಲಿ ಹಿಂದಿಯಲ್ಲಿ ಜಾಹೀರಾತು ನೀಡಲಾಗಿದೆ. ಹೊರ ರಾಜ್ಯಗಳಿಂದ ಆನ್‌ಲೈನ್ ಮತ್ತು ಭೌತಿಕ ವಾಗಿಯೂ ಅರ್ಜಿಗಳನ್ನು ಸ್ವೀಕರಿಸುವಂತೆ ಎಲ್ಲಾ ರಾಜ್ಯಗಳು /ಕೇಂದ್ರಾಡಳಿತ ಪ್ರದೇಶಗಳ ಚುನಾವಣಾಧಿಕಾರಿಗಳನ್ನು ಕೋರಲಾಗಿದೆ ಎಂದು ಮಾಹಿತಿ ನೀಡಿದೆ.

ಪ್ರತಿಯೊಬ್ಬ ಮತದಾರರು ಹಾಗು ಎಲ್ಲಾ ರಾಜಕೀಯ ಪಕ್ಷಗಳ ಭಾಗವಹಿಸುವಿಕೆಯನ್ನು ಖಾತ್ರಿಪಡಿಸಿಕೊಳ್ಳಲು ಶ್ರಮಿಸಲಾಗಿದೆ. ಅದರ ಫಲವಾಗಿ ಸುಮಾರು 7.89 ಕೋಟಿ ಮತದಾರರ ಪೈಕಿ 7.24 ಕೋಟಿಗೂ ಅಧಿಕ ಮತದಾರರು ತಮ್ಮ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ. ಈ ಪ್ರಕ್ರಿಯೆಯಲ್ಲಿ ಬಿಹಾರದ ಮುಖ್ಯ ಚುನಾವಣಾಧಿಕಾರಿ, 38 ಜಿಲ್ಲೆಗಳ ಚುನಾವಣಾಧಿಕಾರಿಗಳು, 243 ಚುನಾವಣಾ ನೋಂದಣಾಧಿಕಾರಿಗಳು, 2,976 ಸಹಾಯಕ ಚುನಾವಣಾಧಿಕಾರಿಗಳು, 77,895 ಬೂತ್ ಮಟ್ಟದ ಅಧಿಕಾರಿಗಳು, 2.45 ಲಕ್ಷಕ್ಕೂ ಅಧಿಕ ಸ್ವಯಂ ಸೇವಕರು ಹಾಗು ಎಲ್ಲಾ ರಾಜಕೀಯ ಪಕ್ಷಗಳ 1.60 ಲಕ್ಷಕ್ಕೂ ಹೆಚ್ಚು ಬೂತ್ ಮಟ್ಟದ ಏಜೆಂಟ್‌ಗಳು ಸಕ್ರಿಯವಾಗಿ ಭಾಗವಹಿಸಿದ್ದಾರೆಯೆಂದು ವಿವರಿಸಿದೆ.

# ಹೇಮಾವತಿ ಜಲಾಶಯಕ್ಕೆ ಬಾಗಿನ ಮರೆತ ಸರ್ಕಾರ

## ಮುಖ್ಯಮಂತ್ರಿಯಿಂದ ಮಲತಾಯಿ ಧೋರಣೆ | ಶಾಸಕ ಹೆಚ್.ಪಿ.ಸ್ವರೂಪ್ ಆರೋಪ

• ಪ್ರಜೋದಯ ವರದಿ

**ಹಾಸನ:** ರಾಜ್ಯದ ಯಾವುದೇ ಪ್ರಮುಖ ಜಲಾಶಯಗಳು ಭರ್ತಿಯಾದರೆ ತಡಮಾಡದೆ ಬಾಗಿನ ಅರ್ಪಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲೆಯ ಹೇಮಾವತಿ ಅಣೆಕಟ್ಟೆ ನಿರ್ಲಕ್ಷಿಸಿದ್ದಾರೆಂಬ ಆರೋಪಗಳು ಕೇಳಿ ಬಂದಿವೆ.

ಈ ಬಾರಿ ಪೂರ್ವ ಮುಂಗಾರು ಹಾಗು ಮುಂಗಾರು ಮಳೆ ಉತ್ತಮವಾಗಿ ಸುರಿದ ಪರಿಣಾಮ ಹೇಮಾವತಿ ಜಲಾ ಶಯ ಭರ್ತಿಯಾಗಿದೆ. ಕೆಆರ್‌ಎಸ್, ಕಬಿನಿ ಜಲಾಶಯ ಗಳು ತುಂಬಿದ ಹಿನ್ನಲೆಯಲ್ಲಿ ಮುಖ್ಯಮಂತ್ರಿ ನೇತೃತ್ವದಲ್ಲಿ ಬಾಗಿನ ಅರ್ಪಿಸಲಾಗಿದೆ. ಮತ್ತೊಂದೆಡೆ ಜಿಲ್ಲೆಯ ಬಗ್ಗೆ ತಾರತಮ್ಯ ತೋರುತ್ತಿರುವುದು ಏಕೆಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

**37 ಟಿಎಂಸಿ ನೀರು ಸಂಗ್ರಹ**

ತಾಲ್ಲೂಕಿನ ಗೊರೂರಿನಲ್ಲಿರುವ ಹೇಮಾವತಿ ಜಲಾಶಯ 2922 ಅಡಿ ಸಾಮರ್ಥ್ಯ ಹೊಂದಿದ್ದು, ಸದ್ಯ 2921.98 ಅಡಿ ನೀರು ಹೊಂದಿದೆ. 37.103 ಟಿಎಂಸಿ ನೀರು ಸಂಗ್ರಹದ ಜಲಾಶಯದಲ್ಲಿ ಪ್ರಸ್ತುತ 37.084 ಟಿಎಂಸಿ ನೀರಿದೆ. 6830 ಕ್ಯೂಸೆಕ್ ಒಳಹರಿವಿದೆ. 6995 ಕ್ಯೂಸೆಕ್ ಹೊರ ಹರಿವಿದೆ. 49 ವರ್ಷದಲ್ಲಿ 33ನೇ ಬಾರಿ ಹೇಮಾವತಿ ಜಲಾಶಯ ಭರ್ತಿಯಾಗಿದ್ದು, ಹಲವಾರು ವಾರಗಳಿಂದ ಜಲಾಶಯ ಗರಿಷ್ಠ ಮಟ್ಟವನ್ನು ಕಾಯ್ದುಕೊಂಡು ಬರಲಾಗಿದೆ. ಮಳೆ ನಿಂತರೆ ನೀರಿನ ಸಂಗ್ರಹ ಪ್ರಮಾಣ ಕಡಿಮೆಯಾಗಲಿದ್ದು ಅಷ್ಟರೊಳಗೆ ಸಿದ್ದರಾಮಯ್ಯ ಬಾಗಿನ ಸಮರ್ಪಿಸುತ್ತಾರೆಂಬ ಆಶಾಭಾವ ಜನರದ್ದಾಗಿದೆ.

**ಸರ್ಕಾರದ ತಾರತಮ್ಯ ನೀತಿ**

ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಸಚಿವ ಸಂಪುಟದ ಅನೇಕ ಸಚಿವರು ಬಾಗಿನ ಅರ್ಪಿಸಿದ್ದಾರೆ. ಹೇಮಾವತಿ ಜಲಾಶಯಕ್ಕೆ ಬಾಗಿನ ಅರ್ಪಣೆ ಮಾಡದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಲ ತಾಯಿ ಧೋರಣೆ ತೋರುತ್ತಿದ್ದಾರೆಂದು ಶಾಸಕ ಹೆಚ್.ಪಿ. ಸ್ವರೂಪ್ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



**ಕೆಆರ್‌ಎಸ್, ಕಬಿನಿಗೆ ನೀಡುವ ಆದ್ಯತೆಯನ್ನು ಹೇಮಾವತಿ ಜಲಾಶಯಕ್ಕೂ ನೀಡಬೇಕು. ಈ ಅಣೆಕಟ್ಟೆ ಹಾಸನ ಜಿಲ್ಲೆಯಲ್ಲಿದೆ ಎಂಬ ಕಾರಣಕ್ಕೆ ಸರ್ಕಾರ ತಾರತಮ್ಯ ಮಾಡಬಾರದು. ಆದಷ್ಟು ಬೇಗ ಸರ್ಕಾರದ ವತಿಯಿಂದ ಬಾಗಿನ ಅರ್ಪಿಸಲು ಕ್ರಮ ಕೈಗೊಳ್ಳಬೇಕು.**

**-ಹೆಚ್.ಪಿ. ಸ್ವರೂಪ್,** ಶಾಸಕ

**ಉಸ್ತುವಾರಿ ಸಚಿವರಿಗೆ ಹೊಣೆ**

ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಳೆದ ತಿಂಗಳ ಜುಲೈ 26ರಂದು ಭೇಟಿ ನೀಡಿದ್ದರು. ಅರಸೀಕೆರೆಗೆ ಆಗಮಿಸಿದ್ದ ಅವರು ಆ ದಿನವೇ ಬಾಗಿನ ಅರ್ಪಣೆ ಮಾಡುತ್ತಾರೆಂಬ ಲೆಕ್ಕಾಚಾರ ಹಲವರದ್ದಾಗಿತ್ತು. ಮುಖ್ಯಮಂತ್ರಿ ಅವರನ್ನು ಜಿಲ್ಲೆಗೆ ಕರೆದುಕೊಂಡು ಬರುವಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಪಾತ್ರವೂ ಹೆಚ್ಚಿರುತ್ತದೆ. ಈ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಕೆ.ಎನ್.ರಾಜಣ್ಣ ಅವರು ಹಾಸನದ ಬಗ್ಗೆ ಅಷ್ಟೊಂದು ಪ್ರೀತಿ ಹೊಂದಿರಲಿಲ್ಲ. ಅವರೇ ಅಪರೂಪಕ್ಕೊಮ್ಮೆ ಬರುತ್ತಿದ್ದರಿಂದ ಮುಖ್ಯಮಂತ್ರಿಯನ್ನು ಕರೆಸುವುದೆಲ್ಲ ಅಸಾಧ್ಯ ಎಂಬಂತಿತ್ತು. ಈಗ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕೃಷ್ಣಬೈರೇಗೌಡ ಅವರನ್ನು ನೇಮಕ ಮಾಡಲಾಗಿದೆ. ಆ. 15ರ ಸ್ವಾತಂತ್ರ್ಯ ದಿನಾಚರಣೆಯಂದು ಜಿಲ್ಲೆಗೆ ಆಗಮಿಸಲಿದ್ದು ಆ ಬಳಿಕ ಬಾಗಿನ ಅರ್ಪಣೆ ಸಮಾರಂಭಕ್ಕೆ ದಿನ ನಿಗದಿ ಮಾಡುತ್ತಾರೆಂದು ಕಾಂಗ್ರೆಸ್‌ನ ಮುಖಂಡರು ಹೇಳುತ್ತಾರೆ.

# ಪ್ಲಾಸ್ಟಿಕ್ ರಾಷ್ಟ್ರ ಧ್ವಜ ಬಳಕೆ ಬೇಡ: ತಹಶೀಲ್ದಾರ್

• ಪ್ರಜೋದಯ ವರದಿ



**ಹೊಳೆನರಸೀಪುರ:** ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ಲಾಸ್ಟಿಕ್ ರಾಷ್ಟ್ರಧ್ವಜ ಬಳಸದೆ ಬಟ್ಟೆಯಿಂದ ತಯಾರಾದ ಧ್ವಜ ಬಳಸಿ ಪರಿಸರಕ್ಕೆ ನೆರವಾಗಬೇಕೆಂದು ತಹಶೀಲ್ದಾರ್ ವೈ.ಎಂ. ರೇಣು ಕುಮಾರ್ ಅವರು ಮನವಿ ಮಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ಲಾಸ್ಟಿಕ್‌ನಿಂದ ತಯಾರಿಸುವ ತಿರಂಗ ಬಾವುಟ ಗಳನ್ನು ವರ್ತಕರು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಬಟ್ಟೆಯಲ್ಲಿ ತಯಾರಿಸಿರುವ ರಾಷ್ಟ್ರ ಧ್ವಜ ಮಾರಾಟ ಮಾಡಬೇಕೆಂದರು.

ಇತ್ತೀಚಿನ ದಿನಗಳಲ್ಲಿ ತಿರಂಗಗಳನ್ನು ಹೆಚ್ಚು ಬಳಸುತ್ತಿದ್ದು, ಅವುಗಳನ್ನು ಉಪಯೋಗಿಸು ವುದು ಸೂಕ್ತವಲ್ಲ. ಈ ನಿಟ್ಟಿನಲ್ಲಿ ವರ್ತಕರು ಮತ್ತು ಸಾರ್ವಜನಿಕರು ಪ್ಲಾಸ್ಟಿಕ್ ತಿರಂಗದ ಬದಲಾಗಿ ಬಟ್ಟೆ ತಿರಂಗ ಉಪಯೋಗಿಸಬೇಕೆಂದರು.

ಸ್ವಾತಂತ್ರ್ಯೋತ್ಸವ ಪ್ರಯುಕ್ತ ಪಟ್ಟಣದನಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಕಚೇರಿಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸುವ ಮೂಲಕ ಸಂಭ್ರಮದಲ್ಲಿ ಭಾಗಿಯಾಗ ಬೇಕು. ವಿವಿಧ ಸಂಘ ಸಂಸ್ಥೆಗಳು ಸಹ ಸ್ವಾತಂತ್ರ್ಯ ದಿನಕ್ಕೆ ಮೆರುಗು ತರಬೇಕೆಂದರು.

# ಆರ್.ಅಶೋಕ್-ಪ್ರಿಯಾಂಕ್ ಖರ್ಗೆ ಜಟಾಪಟಿ

• ಪ್ರಜೋದಯ ವರದಿ



**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ವಂದೇ ಭಾರತ್ ರೈಲಿಗೆ ಚಾಲನೆ ಸಮಾರಂಭಕ್ಕೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಕಡೆಗಣಿಸಿದ್ದಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರು ವ್ಯಂಗ್ಯವಾಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಬಗ್ಗೆ ಕಾಲೆಳೆದ ಪ್ರಿಯಾಂಕ್ ಖರ್ಗೆ ಅವರಿಗೆ ಆರ್. ಅಶೋಕ್ ಸಹ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ. ಆತುರ, ಕಾತುರ, ಅವಸರ, ಹಂಬಲ, ಹಾತೊರೆ, ತವಕ, ಉತ್ಸಾಹ, ಕುತೂಹಲಗಳನ್ನು ತಾವು ಮತ್ತು ತಮ್ಮ ಕುಟುಂಬ ರಿಪಬ್ಲಿಕ್ ಆಫ್ ಕಲಬುರಗಿ ಸೃಷ್ಟಿ ಮಾಡಿಕೊಳ್ಳುವ ಬದಲು ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಬಗ್ಗೆ ತೋರಿಸಿದಿ ದ್ದರೆ ಕಲ್ಯಾಣ ಕರ್ನಾಟಕ ಇವತ್ತು ಇಷ್ಟೊಂದು ಹಿಂದೆ ಉಳಿಯುತ್ತಿರಲಿಲ್ಲ ಎಂದ ತಿರುಗೇಟು ನೀಡಿದ್ದಾರೆ.

ಅದಕ್ಕೂ ಮೊದಲು ಪೋಸ್ಟ್ ಮಾಡಿದ್ದ ಸಚಿವ ಪ್ರಿಯಾಂಕ್ ಖರ್ಗೆ ಅವರು, ಅಣ್ಣಾ, ನಿಮ್ಮನ್ನು ಕಡೆಗಣಿಸಿದ್ದನ್ನು, ತಮಗಾದ ಅವಮಾನವನ್ನು, ನಿರ್ಲಕ್ಷ್ಯವನ್ನು ನಾನು ಜನರ ಮುಂದೆ ತೆರೆದಿಟ್ಟಿದ್ದಕ್ಕೆ ಕಾರ್ಯಕ್ರಮದ ಕೊನೆ ಕ್ಷಣದಲ್ಲಿ ನಿಮಗೆ ಸ್ಥಾನ ಮತ್ತು ಕೊಂಚ ಮಾನ ದೊರಕಿದೆ. ಅದಕ್ಕಾಗಿ ನೀವು ನನಗೆ ಧನ್ಯವಾದ ಹೇಳಬೇಕು ಎಂದಿದ್ದಾರೆ.

ಆಡಳಿತ ಪಕ್ಷದವರ ಟೀಕೆಗೆ ಆಹಾರವಾಗುತ್ತಿದೆ ದಯಮಾಡಿ ಹೆಸರು ಸೇರಿಸಿ ಎಂದು ಕೇಂದ್ರ ಸರ್ಕಾರದ ಕೈಕಾಲು ಹಿಡಿದು ಬೇಡಿಕೊಂಡು ಹೆಸರು ಸೇರ್ಪಡೆಗೆ ಶ್ರಮಿಸಿದ ನಿಮ್ಮ ಬೆಂಬಲಿಗರಿಗೂ ಧನ್ಯವಾದ ಹೇಳಬೇಕು. ರಾತ್ರೋ ರಾತ್ರಿ ಹೆಸರು ಸೇರಿಸಿಕೊಂಡು ನಿಮ್ಮ ಬೆನ್ನನ್ನು ನೀವೇ ತಟ್ಟಿಕೊಳ್ಳುತ್ತಾ ಮೈಮರೆಯಬೇಡಿ.

ಏನೇ ಮಾಡಿದರೂ ನಿಮ್ಮ ಜೂನಿಯರ್ ವಿಜಯೇಂದ್ರರಿಗಿಂತ ನೀವು ಕೆಳಗೇ ಇದ್ದೀರಿ. ಈ ಹೆಸರು ಸೇರ್ಪಡೆ ನಿಮಗೆ ದೊರಕಿದ ಸಮ್ಮಾನವಲ್ಲ ಭಿಕ್ಷೆ ಅಷ್ಟೇ. ಮೆಟ್ರೋ ಕಾರ್ಯಕ್ರಮದಲ್ಲಿ ಮಾತ್ರ ನಿಮಗೆ ಜಾಗ, ವಂದೇ ಭಾರತ್ ರೈಲಿಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ನಿಮಗೆ ಕುರ್ಚಿ ಇಲ್ಲ, ಶಿಕಾರಿಪುರದ ಶಾಸಕ ವಿಜಯೇಂದ್ರರಿಗೆ ಮಾತ್ರ ಕುರ್ಚಿ. ಪಾಪ ನೀವು ಎಂದು ವ್ಯಂಗ್ಯವಾಡಿದ್ದಾರೆ.

# ಹಸಿವು ಮುಕ್ತ ಭಾರತ: ಪ್ರಧಾನಿ ಮೋದಿ ಸಂಕಲ್ಪ

• ಪ್ರಜೋದಯ ವರದಿ



**ಅರಸೀಕೆರೆ:** ಹಸಿವು ಮುಕ್ತ ಭಾರತ ನಿರ್ಮಾಣಕ್ಕೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಆದ್ಯತೆ ನೀಡಿದೆ ಎಂದು ಶಾಸಕ ಹೆಚ್.ಕೆ.ಸುರೇಶ್ ಅವರು ಹೇಳಿದರು.

ತಾಲ್ಲೂಕಿನ ಜಾವಗಲ್ ಹೋಬಳಿ ಗುಡ್ಡದ ಕೆಂಗನಹಳ್ಳಿ ಗ್ರಾಮದಲ್ಲಿ ಕೃಷಿ ಇಲಾಖೆ ವತಿ ಯಿಂದ ರೈತರಿಗೆ ರಾಗಿ ಬಿತ್ತನೆ ಬೀಜ, ಔಷಧ ವಿತರಿಸಿ ಮಾತನಾಡಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಆಹಾರ ಭದ್ರತಾ ಕಾಯ್ದೆಯನ್ನು ರೈತರು ಸದ್ಬಳಕೆ ಮಾಡಿಕೊಂಡು ಆರ್ಥಿಕ ಪ್ರಗತಿ ಸಾಧಿಸಬೇಕು. ಅದಕ್ಕೆ ಪೂರಕ ಎನ್ನುವಂತೆ ರೈತರು ಬೆಳೆಯುವ ಭತ್ತ, ರಾಗಿ, ತೊಗರಿ, ಜೋಳ, ಕಬ್ಬು, ಕೊಬ್ಬರಿ ಸೇರಿ ಹಲವು ಧಾನ್ಯಗಳನ್ನು ಕೇಂದ್ರ ಸರ್ಕಾರ ಬೆಂಬಲ ಯೋಜನೆಯಡಿ ಖರೀ ದಿಸುವ ಮೂಲಕ ಅನ್ನದಾತರ ನೆರವಿಗೆ ಧಾವಿಸಿದೆ ಎಂದರು.

ಇತ್ತೀಚಿನ ಸಮೀಕ್ಷೆ ಅನುಸಾರ ರಾಗಿ ಬೆಳೆಯುವ ರಾಜ್ಯಗಳ ಪೈಕಿ ಕರ್ನಾಟಕ ಅಗ್ರಸ್ಥಾನದಲ್ಲಿದೆ ಎನ್ನುವುದೇ ಹೆಮ್ಮೆಯ ಸಂಗತಿ. ಬೇಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಹಂದ್ರಾಳು, ಕರುಗುಂದ ಒಳಗೊಂಡಂತೆ ಹತ್ತಾರು ಹಳ್ಳಿಗಳ 300ಕ್ಕೂ ಹೆಚ್ಚು ರೈತರಿಗೆ ತಲಾ ಐದು ಕೆ.ಜಿ. ಬ್ಯಾಗ್ ರಾಗಿ ಹಾಗು ಅಗತ್ಯ ಪೋಷಕಾಂಶವುಳ್ಳ ಔಷಧ ನೀಡಲಾಗುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ನೀಡುತ್ತಿರುವ ಎಲ್ಲಾ ಬಗೆಯ ಸವಲತ್ತುಗಳನ್ನು ಪಡೆದು ಆರ್ಥಿಕವಾಗಿ ಬಲಿಷ್ಠರಾಗಬೇಕು. ನಷ್ಟ ಪರಿಹಾರ ಪಡೆಯುವ ದೃಷ್ಟಿಯಿಂದ ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಬೇಕೆಂದು ಸಲಹೆ ನೀಡಿದರು.

ರೈತರ ಹಿತ ಮನಗಂಡಿರುವ ಪ್ರಧಾನಿ ನರೇಂದ್ರ ಮೋದಿ ಪ್ರಧಾನ್ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಪ್ರತಿ ರೈತರ ಖಾತೆಗೆ 2 ಸಾವಿರ ರೂ. ಹಣ ಹಮೆ ಮಾಡು ತ್ತಿದೆ. ಕೇಂದ್ರದ ಐತಿಹಾಸಿಕ ನಿರ್ಧಾ ರದಿಂದ ದೇಶದ ಲಕ್ಷಾಂತರ ರೈತರಿಗೆ ರಸಗೊಬ್ಬರ, ಬಿತ್ತನೆ ಬೀಜ ಸೇರಿ ಅಗತ್ಯ ವಸ್ತುಗಳನ್ನು ಪಡೆಯಲು ನೆರವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕರಗುಂದ ಗ್ರಾಮ ಪಂಚಾಯಿತಿ ಅಧ್ಯಕ್ಷ ಗೊಲ್ಲರಹಳ್ಳಿ ವಾಸು ಅವರು ಮಾತನಾಡಿ, ಉಭಯ ಸರ್ಕಾರಗಳು ರೈತರಿಗೆ ಬಿತ್ತನೆ ಬೀಜ, ಔಷಧ ಸೇರಿ ಅಗತ್ಯ ಕೃಷಿ ಪರಿಕರಗಳನ್ನು ನೀಡುತ್ತಿವೆ. ಆಧುನಿಕ ತಂತ್ರಜ್ಞಾನದ ಜೊತೆಗೆ ಸಾಂಪ್ರದಾಯಿಕ ಕೃಷಿಯಲ್ಲಿ ತೊಡಗಿಸಿಕೊಂಡಲ್ಲಿ ನಿರೀಕ್ಷೆಗೂ ಮೀರಿದ ಲಾಭ ಗಳಿಸಲು ಸಾಧ್ಯವಿದೆ ಎಂದರು.

ಜಾವಗಲ್ ಹೋಬಳಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಸುಬ್ರಹ್ಮಣ್ಯ ಮಾತನಾಡಿದರು. ಹಂದ್ರಾಳು ಗ್ರಾಮ ಪಂಚಾಯಿತಿ ಅಧ್ಯಕ್ಷ ಕುಮಾರ್, ಸದಸ್ಯರಾದ ಸಂಪತ್, ದಿನೇಶ್, ವಿಎಸ್‌ಎಸ್‌ಎನ್ ನಿರ್ದೇಶಕ ಬಸವರಾಜ್, ಮುಖಂಡರಾದ ಕೋಳಗುಂದ ರೇಣುಕಾ ಪ್ರಸಾದ್, ಕಲ್ಯಾಡಿ ಬಸವರಾಜ್, ನವೀನ್ ಇತರರಿದ್ದರು.

# ಬ್ರಾಹ್ಮಣ ಸಭಾದಿಂದ ಋಗ್ವೇದ-ಯಜುರ್ವೇದ ಉಪಕರ್ಮ

• ಪ್ರಜೋದಯ ವರದಿ



**ಹಾಸನ:** ಶ್ರಾವಣ ಮಾಸದ ಪೂರ್ಣಿಮೆ ಅಂಗವಾಗಿ ನಗರದ ಬ್ರಾಹ್ಮಣ ಸಭಾ ವತಿಯಿಂದ ನಗರದ ಶಂಕರ ಮಠದಲ್ಲಿ ಋಗ್ವೇದ ಮತ್ತು ಯಜುರ್ವೇದ ಉಪಕರ್ಮ ಕಾರ್ಯಕ್ರಮ ಆಚರಿಸಲಾಯಿತು.

ಧಾರ್ಮಿಕ ಕೈಂಕರ್ಯ ಅಂಗವಾಗಿ ಪ್ರಾಜಾಪ್ರತ್ಯಾದಿ ನವಕಾಂಡ ಋಷಿಗಳಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ದೇವ, ಋಷಿ ಮತ್ತು ಪಿತೃತರ್ಪಣಗಳನ್ನು ನೀಡಿ, ಪೂರ್ವಜರ ಸ್ಮರಣೆ ಮಾಡಲಾಯಿತು. ವಿಧಿ ವಿಧಾನಗಳ ಬಳಿಕ ನೂತನ ಯಜ್ಞೋಪವೀತ (ಜನಿವಾರ) ಧಾರಣೆ ಮಾಡಲಾಯಿತು.

ವೇದಬ್ರಹ್ಮ ಕೇಶವ ಶರ್ಮ ಅವರು ಮಾತನಾಡಿ, ಇದು ಕೇವಲ ಧಾರ್ಮಿಕ ವಿಧಿಯಲ್ಲ, ಹಿಂದೂ ಸಂಪ್ರದಾಯದ ಪ್ರಮುಖ ಆಚರಣೆ. ಈ ದಿನದಂದು ವೇದಾಧ್ಯಯನ ಪುನರಾರಂಭಿ ಸಲು ಸಂಕಲ್ಪ ಮಾಡಲಾಗುತ್ತದೆ. ಹೊಸ ಯಜ್ಞೋಪವೀತ ಧರಿಸುವ ಮೂಲಕ ಬ್ರಾಹ್ಮಣರು ತಮ್ಮ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ನೆನಪಿಸಿಕೊಳ್ಳುತ್ತಾರೆಂದರು.

ಜ್ಞಾನ ಮತ್ತು ಸಂಸ್ಕೃತಿಯ ಸಂರಕ್ಷಣೆಯ ಪ್ರತೀಕವಾಗಿರುವ ಈ ಕಾರ್ಯಕ್ರಮವು ವೇದಗಳ ಜ್ಞಾನವನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ ಉದ್ದೇಶವನ್ನೂ ಹೊಂದಿದೆ ಎಂದು ತಿಳಿಸಿದರು. ಋಗ್ವೇದ ಉಪಕರ್ಮವನ್ನು ವೇದ ಮೂರ್ತಿ ಗಣೇಶ ಶರ್ಮಾ ಮತ್ತು ಯಜುರ್ವೇದ ಉಪಕರ್ಮವನ್ನು ಕೇಶವಪ್ರಸಾದ ಶರ್ಮಾ ನೆರವೇರಿಸಿದರು.

# ಆರ್‌ಆರ್‌ನೊಂದಿಗೆ ಪಯಣ ಅದ್ಭುತ

**ಪ್ರಜೋದಯ ವರದಿ**



**ನವದೆಹಲಿ:** ಇಂಡಿಯನ್ ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಿಯಲ್ಲಿರುವ ರಾಜಸ್ಥಾನ ರಾಯಲ್ಸ್ ತಂಡವನ್ನು ವಿಕೆಟ್‌ಕೀಪರ್ ಬ್ಯಾಟರ್ ಸಂಜು ಸ್ಯಾಮ್ಸನ್ ಅವರು ತೊರೆ ಯಲಿದ್ದಾರೆಂಬ ಊಹಾಪೋಹಗಳು ಕೇಳಿ ಬರುತ್ತಿವೆ. ಸ್ವತಃ ಸಂಜು ಅವರೇ ತಮ್ಮನ್ನು ತಂಡದಿಂದ ಬಿಡುಗಡೆ ಮಾಡುವಂತೆ ಫ್ರ್ಯಾಂಚೈಸಿಗೆ ಮನವಿ ಮಾಡಿದ್ದಾರೆಂದೂ ಹೇಳಲಾ ಗುತ್ತಿದೆ.

2013ರಿಂದಲೂ ಅವರು ಈ ತಂಡದಲ್ಲಿದ್ದಾರೆ. ನಾಯಕತ್ವ ಕೂಡ ವಹಿಸಿದ್ದಾರೆ. ಇದೇ ಹೊತ್ತಿನಲ್ಲಿ ಅವರು ಭಾರತ ತಂಡದ ಮಾಜಿ ಸ್ಪಿನ್ನರ್ ಆರ್. ಅಶ್ವಿನ್ ಅವರ ಯೂಟ್ಯೂಬ್ ಕಾರ್ಯ ಕ್ರಮದಲ್ಲಿ ನೀಡಿರುವ ಹೇಳಿಕೆ ಕೂಡ ಗಮನ ಸೆಳೆಯುತ್ತಿದೆ. ರಾಜಸ್ಥಾನ ರಾಯಲ್ಸ್ ತಂಡವು ನನ್ನ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದೆ. ಕೇರಳದ ಸಣ್ಣ ಹಳ್ಳಿಯೊಂದರಿಂದ ಬಂದ ನಾನು ಪ್ರತಿಭೆ ತೋರಿಸುವ ತವಕದಲ್ಲಿದ್ದೆ. ರಾಹುಲ್ (ದ್ರಾವಿಡ್) ಸರ್ ಮತ್ತು ಮನೋಜ್ ಬದಲೆ ಸರ್ ಅವರು ಪ್ರತಿಭೆ ಗುರುತಿಸಿ ದರು. ಜಗದ ಮುಂದೆ ಪ್ರತಿಭೆ ಪ್ರದರ್ಶಿಸಲು ಅವಕಾಶ ಒದಗಿಸಿ ಕೊಟ್ಟರು ಎಂದು ಸಂಜು ಹೇಳಿದ್ದಾರೆ.

ಆ ಸಮಯದಲ್ಲಿ ಅವರು ನನ್ನ ಮೇಲೆ ನಂಬಿಕೆ ಇಟ್ಟರು. ನನ್ನ ಪಯಣದುದ್ದಕ್ಕೂ ಪ್ರೋತ್ಸಾಹಿಸಿದರು. ಅವರಿಗೆ ನಾನು ಆಭಾರಿ ಯಾಗಿರುವೆ. ಅದಕ್ಕಾಗಿಯೇ ಈ ಫ್ರ್ಯಾಂಚೈಸಿಯು ನನಗೆ ಬಹಳಷ್ಟು ಆಪ್ತವಾಗಿದೆ ಎಂದರು.

ಆರ್.ಅಶ್ವಿನ್ ಅವರು ಚೆನ್ನೈ ಸೂಪರ್ ಕಿಂಗ್ಸ್ ತಂಡದಿಂದ ಬಿಡುಗಡೆ ಮಾಡಲು ಕೋರಿದ್ದಾ ರೆಂದು ಪಿಟಿಐ ಸುದ್ದಿ ಸಂಸ್ಥೆಯು ಶುಕ್ರವಾರ ವರದಿ ಮಾಡಿತ್ತು. ಸಂಜು ಅವರು ರಾಯಲ್ಸ್‌ನಿಂದ ಚೆನ್ನೈಗೆ ಬರುವ ಸಾಧ್ಯತೆ ಇದೆ ಎಂದೂ ಹೇಳಲಾಗುತ್ತಿದೆ. ಹೋದ ವರ್ಷ ಸಂಜು ಅವರು ಬಾಂಗ್ಲಾದೇಶ ಮತ್ತು ದಕ್ಷಿಣ ಆಫ್ರಿಕಾ ಎದುರಿನ ಟಿ-20 ಪಂದ್ಯಗಳಲ್ಲಿ ಮೂರು ಶತಕ (ಐದು ಪಂದ್ಯ ಗಳನ್ನು ಆಡಿದ್ದರು) ಗಳಿಸಿದ್ದರು.

ಟಿ-20 ವಿಶ್ವಕಪ್ (2024) ಟೂರ್ನಿಯ ನಂತರ ಮಹತ್ವದ ಬದಲಾವಣೆಯಾಯಿತು. ಗೌತಮ್ ಗಂಭೀರ್ ಅವರು ಬಂದರು ಮತ್ತು ಸೂರ್ಯಕುಮಾರ್ ಯಾದವ್ ನಾಯಕರಾಗಿ ನೇಮಕ ವಾದರು. ಆ ಹೊತ್ತಿನಲ್ಲಿ ನಾವು ಆಂಧ್ರದಲ್ಲಿ ನಡೆಯುತ್ತಿದ್ದ ದುಲೀಪ್ ಟ್ರೋಫಿ ಟೂರ್ನಿಯಲ್ಲಿ ಆಡುತ್ತಿದ್ದೆ. ಇನ್ನೊಂದು ತಂಡದಲ್ಲಿ ಸೂರ್ಯ ಕೂಡ ಅಲ್ಲಿ ಆಡುತ್ತಿದ್ದರು. ಆಗ ಅವರು ನನ್ನ ಬಳಿ ಬಂದು ಒಳ್ಳೆಯ ಅವಕಾಶವೊಂದು ಸಿಗುತ್ತಿದ್ದೆ. ಏಳು ಅಂತರರಾಷ್ಟ್ರೀಯ ಟಿ-20 ಪಂದ್ಯಗಳನ್ನು ಆಡಲಿದ್ದೇವೆ. ಎಲ್ಲಾ ಪಂದ್ಯಗಳಲ್ಲಿಯೂ ಇನಿಂಗ್ಸ್ ಆರಂಭಿಸುವ ಅವಕಾಶವನ್ನು ಕೊಡುವೆ ಚೆನ್ನಾಗಿ ಆಡು ಅಂದಿದ್ದರು ಎಂದು ಸಂಜು ನೆನಪಿಸಿಕೊಂಡರು.

# ಚವ್ವೇನಹಳ್ಳಿಯಲ್ಲಿ ಲಕ್ಷ್ಮಿದೇವಿಗೆ ವಿಶೇಷ ಪೂಜೆ



• ಪ್ರಜೋದಯ ವರದಿ


**ಚನ್ನರಾಯಪಟ್ಟಣ:** ತಾಲ್ಲೂಕಿನ ಚವ್ವೇನಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಲಕ್ಷ್ಮೀದೇವಿ ಅಮ್ಮನವರ ದೇವಾಲಯದಲ್ಲಿ ವಿಶೇಷ ಪೂಜೆ ಹಾಗು ಅನ್ನ ಸಂಪರ್ಪಣೆ ನೆರವೇರಿತು.

ಶ್ರೀ ಲಕ್ಷ್ಮಿದೇವಿ ಹಬ್ಬದ ಪ್ರಯುಕ್ತ ದೇವಾಲ ಯದಲ್ಲಿ ಬೆಳಿಗ್ಗೆಯಿಂದಲೇ ವಿಶೇಷ ಪೂಜೆ ಅಭಿಷೇಕ ಹೂವಿನ ಅಲಂಕಾರ ಸೇರಿ ಮಹಾಮಂಗಳಾರತಿ ನೆರ ವೇರಿತು. ಮಳೆ ನಡುವೆಯೂ ಗ್ರಾಮದ ಮಹಿಳೆ ಯರು ತಂಬಿಟ್ಟಿನ ಆರತಿಯೊಂದಿಗೆ ದೇವಾಲಯಕ್ಕೆ ಆಗಮಿಸಿ ಗ್ರಾಮದಲ್ಲಿ ಉತ್ತಮ ಮಳೆ ಬೆಳೆಯಾಗಲಿ ಹಾಗು ತಮ್ಮ ಕುಟುಂಬಕ್ಕೆ ಒಳಿತಾಗಲಿ ಎಂದು ಶ್ರೀ ಲಕ್ಷ್ಮಿ ದೇವಿ ಅಮ್ಮನವರಿಗೆ ಪೂಜೆ ಸಲ್ಲಿಸಿದರು.

ಶ್ರೀ ಲಕ್ಷ್ಮಿದೇವಿ ಹಬ್ಬದ ಪ್ರಯುಕ್ತ ಗ್ರಾಮದ ವತಿಯಿಂದ ಭಕ್ತರಿಗೆ ಅನ್ನಸಂತರ್ಪಣೆ ವಿತರಿಸ ಲಾಯಿತು. ಮುಖಂಡರಾದ ಸಿ.ಆರ್.ಮಧು, ಲೋಕೇಶ್, ನಾಗರಾಜ್, ಸಿ.ಜಿ. ರಮೇಶ್, ಸುರೇಶ್, ಅರಸೇಗೌಡ, ಜಗದೀಶ್,ಡೈರಿ ಕಾರ್ಯದರ್ಶಿ ಮಣಿ, ಅರ್ಚಕ ಗೋಪಿ, ಮಂಜುನಾಥ್ ಇದ್ದರು.

# ಐಬಿಆರ್-ಅಬ್ದುಲ್ ಕಲಾಂ ವರ್ಲ್ಡ್ ರೆಕಾರ್ಡ್‌ಗೆ ಐರಾ ವಿಹಾನ

• ಪ್ರಜೋದಯ ವರದಿ




**ಹಾಸನ:** ಒಂದೂವರೆ ವರ್ಷದ ಬಾಲಕಿ ಚಿಕ್ಕ ವಯಸ್ಸಿನಲ್ಲೇ ಅಗಾಧ ಪಾಂಡಿತ್ಯದಿಂದ 'ಇಂಡಿಯಾ ಬುಕ್ ಆಫ್ ರೆಕಾರ್ಡ್ ಹಾಗು ಕಲಾಂ ವರ್ಲ್ಡ್ ರೆಕಾರ್ಡ್‌ನಿಂದ ಪ್ರಮಾಣ ಪತ್ರ ಪಡೆದಿದ್ದಾರೆ.

ನಗರದ ಉದಯಗಿರಿ ನಿವಾಸಿ ಪ್ರವೀಣ್ ದೇವಪ್ಪ ಹಾಗು ತನುಶ್ರೀ ಅವರ ಪುತ್ರಿ ಐರಾ ವಿಹಾನ ಸಾಧಕ ಬಾಲಕಿ. ಸಣ್ಣ ವಯಸ್ಸಿನಲ್ಲೇ ಅದ್ಭುತ ಜ್ಞಾಪಕ ಶಕ್ತಿಯಿಂದಾಗಿ ಗುರುತರ ಸಾಧನೆ ಮಾಡಿರುವುದು ಕುಟುಂಬಸ್ಥರು ಸಂತಸ ವ್ಯಕ್ತಪಡಿಸಿದ್ದಾರೆ.

ಐರಾ ಸಾಧನೆ ಏನು

ಬಾಲಕಿ ಐರಾ ವಿಹಾನ ಶರೀರದ 17 ಅಂಗ, 23 ಪ್ರಾಣಿಗಳ ಹೆಸರು, 9 ಜಲಚರ ಪ್ರಾಣಿ, 17 ಹಣ್ಣು, 16 ತರಕಾರಿ, 9 ಕಾರು ಸಂಬಂಧಿತ ವಸ್ತುಗಳು, 6 ಪಕ್ಷಿ, 24 ಇತರೆ ವಸ್ತುಗಳನ್ನು ತನ್ನ ಬುದ್ಧಿ ಕ್ಷಮತೆಯಿಂದ ನಿರಾಳವಾಗಿ ಗುರುತಿಸಿ ಅದರ ವಿವರಣೆಯನ್ನು ನೀಡುತ್ತಾಳೆ. ಜೊತೆಗೆ 9 ತುಣುಕುಗಳ ಆಕಾರ ಪಝಲ್ ಹಾಗು 8 ತುಣುಕುಗಳ ತರಕಾರಿ, ಹಣ್ಣು ಮತ್ತು ವಾಹನಗಳ ಪಝಲ್‌ಗಳನ್ನು ಬಗೆಹರಿಸುತ್ತಾಳೆ. ಐರಾಳ ಈ ಸಾಧಗೆ ಐಬಿಆರ್ ಹಾಗು ಅಬ್ದುಲ್ ಕಲಾಂ ವರ್ಲ್ಡ್ ರೆಕಾರ್ಡ್ ಪ್ರಮಾಣ ಪತ್ರ ನೀಡಿದೆ.

# ಸಮಾಜಕ್ಕಾಗಿ ದುಡಿಯುವವರ ಗೌರವಿಸಬೇಕು



• ಪ್ರಜೋದಯ ವರದಿ

**ಹಾಸನ:** ವೈಯಕ್ತಿಕ ಹಿತಾಸಕ್ತಿ ಮರೆತು ಸಾಮಾಜಿಕ ಕಾರ್ಯಗಳಲ್ಲಿ ತೊಡಗುವವರನ್ನು ಗೌರವಿಸುವುದು ಒಳ್ಳೆಯ ಕೆಲಸವೆಂದು ಮೇಯರ್ ಎಂ. ಚಂದ್ರೇಗೌಡ ಅವರು ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಭಾನುವಾರ ಹಮ್ಮಿ ಕೊಂಡಿದ್ದ ಜನನಿ ಫೌಂಡೇಶನ್ ವಾರ್ಷಿಕೋತ್ಸವದಲ್ಲಿ ಮಾತನಾಡಿ, ಸರ್ಕಾರ ಮಾಡದ ಕೆಲಸಗಳನ್ನು ಸಂಘಟನೆಗಳು ಹಾಗು ಸಾರ್ವಜನಿಕರು ಮಾಡುತ್ತಾರೆ. ಜನನಿ ಫೌಂಡೇಶನ್ ಸಹ ಆ ನಿಟ್ಟಿನಲ್ಲಿ ಅನೇಕ ಕಾರ್ಯಕ್ರಮ ಮಾಡಿಕೊಂಡು ಬಂದಿದೆ. ನಾಲ್ಕು ತಿಂಗಳಲ್ಲಿ 40 ವಿವಿಧ ಕಾರ್ಯಕ್ರಮ ಮಾಡಿರುವುದು ಶ್ಲಾಘನೀಯವೆಂದರು.

ಫೌಂಡೇಶನ್‌ನ ವಾರ್ಷಿಕೋತ್ಸವ ಅಂಗವಾಗಿ ಪತ್ರಕರ್ತರಿಗೆ ಸನ್ಮಾನ ಹಮ್ಮಿ ಕೊಂಡಿರುವುದು ಉತ್ತಮ ಬೆಳವಣಿಗೆ. ಮಾಧ್ಯಮ ಪ್ರತಿನಿಧಿಗಳು ಸದಾ ಒತ್ತಡದಲ್ಲೇ ಕೆಲಸ ಮಾಡುತ್ತಾರೆ. ಅವರ ಸೇವೆ ಗುರುತಿಸುವುದು ನಾಗರಿಕ ಸಮಾಜದ ಜವಾಬ್ದಾರಿ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಮಾತನಾಡಿ, ಆಧುನಿಕತೆ ಬೆಳೆದಂತೆ ನಾವು ಮಾನವೀಯ ಮೌಲ್ಯಗಳನ್ನು ಮರೆಯುತ್ತಿದ್ದೇವೆ. ಎಲ್ಲರದ್ದೂ ಧಾವಂತದ ಜೀವನವಾಗಿದೆ. ಸೇವೆ ಎಂದರೆ ಹೇಗಿರುತ್ತದೆಂದು ಕೇಳುವಷ್ಟರ ಮಟ್ಟಿಗೆ ಮನುಷ್ಯನ ಮನಸ್ಥಿತಿ ಬದಲಾಗಿದೆ ಎಂದರು.

ಅಪಘಾತದಲ್ಲಿ ಯಾರಾದರೂ ಗಂಭೀರ ಗಾಯಗೊಂಡರೆ ಅಂತವರನ್ನು ಆಸ್ಪತ್ರೆಗೆ ಸೇರಿಸುವ ಬದಲು ಸೆಲ್ಫಿ ಕ್ಲಿಕ್ಕಿಸಿಕೊಳ್ಳುವ ಮಟ್ಟಿಗೆ ಮನಸ್ಥಿತಿ ಬದಲಾಗಿದೆ. ನಮ್ಮೊಳಗಿನ ಮಾನವೀಯತೆ ಎಲ್ಲಿಗೆ ಹೊಯ್ತು ಎಂಬ ಪ್ರಶ್ನೆಯನ್ನು ಕೇಳಿಕೊಳ್ಳಬೇಕಿದೆ ಎಂದರು.

ಸದೃಢ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಹೆಚ್ಚಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಕಿತ್ತೂರು ರಾಣಿ ಚನ್ನಮ್ಮ, ಝಾನ್ಸಿ ರಾಣಿ ಲಕ್ಷ್ಮೀಬಾಯಿ ಹೇಗೆ ಹೋರಾಡಿದರೋ ಅದೇ ರೀತಿ ಎಲ್ಲಾ ಮಹಿಳೆಯರು ಸಮಾಜದ ಹಿತಕ್ಕಾಗಿ ದುಡಿಯುತ್ತಿದ್ದಾರೆ. ಜನನಿ ಫೌಂಡೇಶನ್ ಸಹ ಆ ನಿಟ್ಟಿ ನಲ್ಲಿ ಉತ್ತಮ ಕೆಲಸ ಮಾಡುತ್ತಿದೆ ಎಂದರು.

ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಮಾತನಾಡಿದರು. ಜನನಿ ಫೌಂಡೇಶನ್ ಅಧ್ಯಕ್ಷೆ ಭಾನುಮತಿ, ಪತ್ರಕರ್ತೆ ಲೀಲಾವತಿ, ಗ್ಯಾರಂಟಿ ರಾಮಣ್ಣ, ಉದ್ಯಮಿ ಕಾಂತರಾಜ್, ಗಿರಿಗೌಡ ಇದ್ದರು.

**ಸಿಕಂದರಾಬಾದ್ : ಕಾಲೇಜ್ ಆಫ್ ಡಿಫೆನ್ಸ್ ಮ್ಯಾನೇಜ್‌ಮೆಂಟ್‌ನಲ್ಲಿ ಸಿಡಿಎಸ್ ಅನಿಲ್ ಚೌಹಾಣ್**

# ಆಪರೇಷನ್ ಸಿಂಧೂರ ಸಮನ್ವಯತೆಗೆ ಸಾಕ್ಷಿ

• ಪ್ರಜೋದಯ ವರದಿ



**ನವದೆಹಲಿ:** ಆಪರೇಷನ್ ಸಿಂಧೂರ ಕಾರ್ಯಾಚರಣೆಯು ಭಾರತೀಯ ಸೇನೆಯ ಮೂರು ಪಡೆಗಳ ಸಮನ್ವಯತೆಗೆ ಸಾಕ್ಷಿಯಾಗಿದೆ ಎಂದು ಸೇನಾ ಪಡೆಗಳ ಮುಖ್ಯಸ್ಥ (ಸಿಡಿಎಸ್) ಅನಿಲ್ ಚೌಹಾಣ್ ಭಾನುವಾರ ಹೇಳಿದರು.

ಸಿಕಂದರಾಬಾದ್‌ನಲ್ಲಿರುವ ಕಾಲೇಜ್ ಆಫ್ ಡಿಫೆನ್ಸ್ ಮ್ಯಾನೇಜ್‌ಮೆಂಟ್‌ನಲ್ಲಿ ಮಾತನಾಡಿದ ಅವರು ಹೊಸದಾಗಿ ಸೃಷ್ಟಿಯಾಗುತ್ತಿರುವ ಭದ್ರತಾ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಹಾಗೂ ಸುಧಾರಣೆಗಳನ್ನು ಜಾರಿಗೊಳಿಸಲು ಮೂರು ಪಡೆಗಳು ತಮ್ಮೊಳಗಿನ ಸಮನ್ವ ಯತೆಯನ್ನು ಮುಂದುವರಿಸುವ ಅವಶ್ಯಕತೆಯಿದೆ ಎಂದರು.

ಇಂದಿನ ಆಧುನಿಕ ಯುದ್ಧಕ್ಷೇತ್ರದಲ್ಲಿ ತ್ರಂತ್ರಜ್ಞಾನವನ್ನು ಸಮ ರ್ಪಕವಾಗಿ ಬಳಸಿಕೊಳ್ಳಲು ಮಿಲಿಟರಿಯು ಅಳವಡಿಸಿಕೊಳ್ಳುತ್ತಿರುವ ತಂತ್ರಗಾರಿಕೆ ಹಾಗೂ ಬದಲಾವಣೆಗಳನ್ನು ಸಿಡಿಎಸ್ ಪ್ರಸ್ತಾಪಿಸಿದರು.

ಮೂರು ಸಶಸ್ತ್ರ ಪಡೆಗಳ ಸಾಮರ್ಥ್ಯ ಹಾಗೂ ಸಮನ್ವಯ ವೃದ್ಧಿಗೆ ಸಂಬಂಧಿಸಿದ ಪ್ರಗತಿಯ ಮುನ್ನೋಟದ ಚಿತ್ರಣವನ್ನು ಸೇನಾ ಪಡೆಗಳ ಮುಖ್ಯಸ್ಥರು ಇದೇ ಸಂದರ್ಭ ಬಿಡುಗಡೆ ಮಾಡಿದರು ಎಂದು ರಕ್ಷಣಾ ಸಚಿವಾಲಯವು ತಿಳಿಸಿದೆ.

ಈ ಮುನ್ನೋಟವು ಸೇನಾಪಡೆಗಳ ಆಧುನೀಕರಣದ ಜೊತೆಗೆ ಕಾರ್ಯಾಚರಣೆಯಲ್ಲಿ ಸಮನ್ವಯ ಹೆಚ್ಚಿಸುವುದು, ದಕ್ಷತೆಯನ್ನು ಸುಧಾರಿಸುವುದು ಮತ್ತು ಯಾವುದೇ ಸವಾಲನ್ನು ಪರಿಣಾಮಕಾರಿಯಾಗಿ ಎದುರಿಸುವ ಖಾತ್ರಿಯನ್ನು ನೀಡಿದೆ.

ಯುದ್ಧಕ್ಷೇತ್ರದಲ್ಲಿ ಭೂಸೇನೆ, ವಾಯುಪಡೆ, ನೌಕಾಪಡೆಯ ಸಾಮರ್ಥ್ಯವನ್ನು ಒಟ್ಟುಗೂಡಿಸುವುದು ಹಾಗೂ ತಮ್ಮಲ್ಲಿನ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಸರ್ಕಾರವು ಮಹತ್ವದ ಯೋಜನೆಯೊಂದನ್ನು ಅನುಷ್ಠಾನಗೊಳಿಸಲು ಕಾರ್ಯೋನ್ಮುಖವಾಗಿರುವ ಹೊತ್ತಿನಲ್ಲಿ ಸೇನಾಪಡೆಗಳ ಮುಖ್ಯಸ್ಥರು ನೀಡಿರುವ ಈ ಹೇಳಿಕೆಯು ಮಹತ್ವ ಪಡೆದಿದೆ.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯ ಪ್ರಕಾರ, ಯುದ್ಧ ಕ್ಷೇತ್ರದಲ್ಲಿರುವ ಪ್ರತಿಯೊಂದು ಘಟಕವು ಭೂಸೇನೆ, ವಾಯುಪಡೆ, ನೌಕಾಪಡೆಯನ್ನು ಒಳಗೊಂಡಿರಲಿದ್ದು, ನಿರ್ದಿಷ್ಟ ಪ್ರದೇಶವೊಂದರಲ್ಲಿ ಎದುರಾಗುವ ಭದ್ರತಾ ಸವಾಲುಗಳನ್ನು ಎದುರಿಸಲು ಒಂದೇ ಘಟಕವಾಗಿ ಕಾರ್ಯನಿರ್ವಹಿಸಲಿವೆ. ಪ್ರಸ್ತುತ ಈ ಮೂರು ಪಡೆಗಳು ಪ್ರತ್ಯೇಕ ಘಟಕಗಳಾಗಿ ಕಾರ್ಯಾಚರಿಸುತ್ತಿವೆ.

**ಚೆಸ್ ಆಟಕ್ಕೆ ಸಿಂಧೂರ ಹೋಲಿಸಿದ ದ್ವಿವೇದಿ**

ಆಪರೇಷನ್ ಸಿಂಧೂರ ಕಾರ್ಯಾಚರಣೆಯು ಚೆಸ್ ಆಟದಂತಿತ್ತು ಎಂದು ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಹೇಳಿದ್ದಾರೆ. ಐಐಟಿ ಮದ್ರಾಸ್‌ನಲ್ಲಿ ಆ.4ರಂದು ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು ಶತ್ರುಗಳ ಮುಂದಿನ ನಡೆ ಏನು ಎಂಬುದು ನಮಗೆ ತಿಳಿದಿರಲಿಲ್ಲ ಎಂದಿದ್ದಾರೆ. ಆದರೆ ನಾಲ್ಕನೇ ದಿನವೇ ಟೆಸ್ಟ್ ಪಂದ್ಯ ಮುಗಿಯಿತು ಎಂದು ಹೇಳಿದ್ದಾರೆ.

ಸೋತಿದ್ದೀರಾ ಅಥವಾ ಗೆದ್ದಿದ್ದೀರಾ ಎಂದು ನೀವು ಪಾಕಿಸ್ತಾನೀಯರನ್ನು ಕೇಳಿದರೆ ಅವರು ನಮ್ಮ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಆಗಿದ್ದಾರೆ. ನಾವು ಮಾತ್ರ ಗೆದ್ದಿರಬೇಕು. ಅದಕ್ಕಾಗಿಯೇ ಅವರು ಫೀಲ್ಡ್ ಮಾರ್ಷಲ್ ಆಗಿದ್ದಾರೆ ಎಂದು ಹೇಳುತ್ತಾರೆ ಎಂದರು.

ಸೇನಾ ಮುಖ್ಯಸ್ಥರ ಭಾಷಣದ ಈ ವಿಡಿಯೋವನ್ನು ಸೇನೆಯು ವಾರಾಂತ್ಯದಲ್ಲಿ ಹಂಚಿಕೊಂಡಿದೆ. ಮುಂದಿನ ಬಾರಿ ಈಗ ನಡೆದ ಅನಾಹುತಕ್ಕಿಂತಲೂ ಹೆಚ್ಚಿನ ದುರ್ಘಟನೆ ಸಂಭವಿಸಬಹುದು. ಶತ್ರು ದೇಶವು ಅದನ್ನು ಏಕಾಂಗಿಯಾಗಿ ಮಾಡುತ್ತದೆಯೋ ಅಥವಾ ಬೇರೆ ದೇಶದ ಬೆಂಬಲವನ್ನು ಪಡೆಯುತ್ತದೆಯೋ ಎಂಬುದು ನಮಗೆ ಗೊತ್ತಿಲ್ಲ. ಆದರೆ ಈ ಬಗ್ಗೆ ನಮಗೆ ಬಲವಾದ ಸುಳಿವು ಸಿಕ್ಕಿದೆ. ಆ ದೇಶವು ಏಕಾಂಗಿ ಯಾಗಿರುವುದಿಲ್ಲ ಎಂಬುದು ನಮ್ಮ ಭಾವನೆ. ಆದ್ದರಿಂದ ನಾವು ಸದಾ ಜಾಗರೂಕರಾಗಿರಬೇಕು ಎಂದು ಯಾವುದೇ ದೇಶದ ಹೆಸರು ಪ್ರಸ್ತಾಪಿಸದೆ ಸೇನಾ ಮುಖ್ಯಸ್ಥರು ತಿಳಿಸಿದರು. ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಕುರಿತಂತೆ ಚೆಸ್ ಹಾಗೂ ಕ್ರಿಕೆಟ್ ಆಟವನ್ನು ದ್ವಿವೇದಿ ಉದಾ ಹರಿಸಿದ್ದಾರೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019